Volume : 9 | Issue : 199 | October : 28 : 2026 : Wednesday
ಸಂಪುಟ : 9 | ಸಂಚಿಕೆ : 199 | ಅಕ್ಟೋಬರ್ : 28 : 2026 : ಬುಧವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



‘ಕೆಜಿಎಫ್’ ಬಳಿಕ ರೂ 7-8 ಕೋಟಿ ಸಂಭಾವನೆ ಕೇಳಿದ್ದೇನೆಂಬುದು ಸುಳ್ಳು. ಹಣಕ್ಕಿಂತ ಉತ್ತಮ ಕಥೆ ಮತ್ತು ಗುಣಮಟ್ಟದ ಪಾತ್ರಗಳಿಗೆ ಆದ್ಯತೆ ನೀಡುತ್ತೇನೆ ಎಂದು ನಟ ಶ್ರೀನಿಧಿ ಶೆಟ್ಟಿ ಸ್ಪಷ್ಟಪಡಿಸಿದ್ದಾರೆ.

ಎಲಾನ್ ಮಸ್ಕ್‌ನ್ ಸ್ಟಾರ್ ಲಿಂಕ್‌ಗೆ ಭಾರತ ಪ್ರವೇಶಕ್ಕೆ ಅನುಮತಿ ನಿರಾಕರಣೆಯೇಕೆ? ಪುಟ 2

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ರಂಗನಾಥ್‌ಗೆ ಜಯ ಪುಟ 3

## ■ ಸುದ್ದಿ ಚುಟುಕು

### ಡಿ. 7ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ

● ವಿಕ್ರಮ ವಾಹಿನಿ । ಬೆಳಗಾವಿ

ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಡಿಸೆಂಬರ್ 7ರಿಂದ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಆರಂಭವಾಗಲಿದೆ. ಹತ್ತು ದಿನಗಳ ಕಾಲ ಅಧಿವೇಶನ ನಡೆಸಲು ಸರ್ಕಾರ ನಿರ್ಧರಿಸಿದ್ದು, ಅಗತ್ಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ವಿಧಾನ ಪರಿಷತ್ ಸಚಿವಾಲಯದ ಕಾರ್ಯದರ್ಶಿ ಜ್ಯೋತಿ ಅವರಿಗೆ ಪತ್ರ ಬರೆದಿದ್ದು, ಅಧಿವೇಶನಕ್ಕೆ ಸಂಬಂಧಿಸಿದ ಅಗತ್ಯ ವ್ಯವಸ್ಥೆಗಳನ್ನು ಮುಂಚಿತವಾಗಿ ಸಿದ್ಧಪಡಿಸಿಕೊಳ್ಳುವಂತೆ ತಿಳಿಸಿದ್ದಾರೆ.

### ಸೌಜನ್ಯ ಪ್ರಕರಣ ಮರು ತನಿಖೆ ಚುರುಕು: 15ಕ್ಕೂ ಹೆಚ್ಚು ಪೊಲೀಸರಿಗೆ ಎಸ್‌ಐಟಿ ನೋಟಿಸ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯಾದ್ಯಂತ ಗಮನ ಸೆಳೆದಿರುವ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರು ತನಿಖೆಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಚುರುಕುಗೊಳಿಸಿದೆ. ಈ ಹಿಂದೆ ಪ್ರಕರಣದ ತನಿಖೆಯ ವಿವಿಧ ಹಂತಗಳಲ್ಲಿ ಭಾಗಿಯಾಗಿದ್ದ 15ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನೋಟಿಸ್ ಜಾರಿಗೊಳಿಸಲಾಗಿದೆ.

2012ರಲ್ಲಿ ನಡೆದ ಪ್ರಕರಣದ ತನಿಖೆಯನ್ನು ಆರಂಭದಲ್ಲಿ ಬೆಳ್ತಂಗಡಿ ಪೊಲೀಸರು ನಡೆಸಿದ್ದರು. ಬಳಿಕ ಪ್ರಕರಣವು ಅಪರಾಧ ತನಿಖಾ ಇಲಾಖೆ (ಸಿಐಡಿ) ಮತ್ತು ಸಿಬಿಐ ತನಿಖೆಯ ಹಂತಗಳನ್ನೂ ತಲುಪಿತ್ತು. ಇದೀಗ ಮರು ತನಿಖೆ ಕೈಗೊಂಡಿರುವ ಎಸ್‌ಐಟಿ, ಹಿಂದಿನ ತನಿಖೆಗಳಲ್ಲಿನ ಕ್ರಮಗಳು, ಸಂಗ್ರಹಿಸಲಾದ ದಾಖಲೆಗಳು ಹಾಗೂ ಸಾಕ್ಷಿಗಳ ಹೇಳಿಕೆಗಳ ಕುರಿತು ಮಾಹಿತಿ ಕಲೆಹಾಕುತ್ತಿದೆ.

ಮಾಹಿತಿಯ ಪ್ರಕಾರ, ಅಪರಾಧ ಪ್ರಕ್ರಿಯಾ ಸಂಹಿತೆಯ (ಸಿಆರ್‌ಪಿಸಿ) ಸೆಕ್ಷನ್ 160ರ ಅಡಿಯಲ್ಲಿ ನೋಟಿಸ್ ನೀಡಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ. ಹಿಂದಿನ ತನಿಖೆಯ ವಿವಿಧ ಹಂತಗಳಲ್ಲಿ ನಡೆದ ಬೆಳವಣಿಗೆಗಳನ್ನು ಮರುಪರಿಶೀಲಿಸುವುದರ ಜತೆಗೆ, ಅಗತ್ಯವಿರುವ ಹೆಚ್ಚುವರಿ ಮಾಹಿತಿಯನ್ನು ಸಂಗ್ರಹಿಸಲು ಎಸ್‌ಐಟಿ ಮುಂದಾಗಿದೆ.

ಮರು ತನಿಖೆಯ ಭಾಗವಾಗಿ ಹಿಂದಿನ ತನಿಖಾಧಿಕಾರಿಗಳಿಗೆ ನೋಟಿಸ್ ನೀಡಿರುವುದು ಮಹತ್ವದ ಬೆಳವಣಿಗೆಯಾಗಿದ್ದು, ವಿಚಾರಣೆಯಿಂದ ಲಭ್ಯವಾಗುವ ಮಾಹಿತಿಯ ಆಧಾರದಲ್ಲಿ ಮುಂದಿನ ತನಿಖೆ ಸಾಗುವ ನಿರೀಕ್ಷೆಯಿದೆ.

### ಕೆಲಸದ ಒತ್ತಡಕ್ಕೆ ಡಿಆರ್‌ಡಿಒ ವಿಜ್ಞಾನಿ ಬಲಿ?

● ವಿಕ್ರಮ ವಾಹಿನಿ । ಬೆಂಗಳೂರು

ಕೆಲಸದ ಒತ್ತಡದಿಂದಾಗಿ ಮಾನಸಿಕವಾಗಿ ನೊಂದಿದ್ದರೆನ್ನಲಾದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ (ಡಿಆರ್‌ಡಿಒ) 47 ವರ್ಷದ ಹಿರಿಯ ವಿಜ್ಞಾನಿಯೊಬ್ಬರು ಅಪಾರ್ಟ್‌ಮೆಂಟ್‌ನಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಸೀಗೇಹಳ್ಳಿಯಲ್ಲಿ ನಡೆದಿದೆ.

ಡಿಆರ್‌ಡಿಒಗೆ ಸಂಬಂಧಿಸಿದ ಎಡಿಎ ಸಂಸ್ಥೆಯಲ್ಲಿ ಗ್ರೇಡ್–ಎಫ್ ವಿಜ್ಞಾನಿಯಾಗಿದ್ದ ಶರದ್ ಕಟಿಯಾರ್ (47) ಮೃತಪಟ್ಟವರು. ವೈಟ್‌ಫೀಲ್ಡ್ ಪೊಲೀಸ್ ಠಾಣೆ ವ್ಯಾಪ್ತಿಯ ಸೀಗೇಹಳ್ಳಿಯಲ್ಲಿ ವಾಸವಿದ್ದ ಅವರು, ಅ.21ರಂದು ಸಂಜೆ 7.30ರ ಸುಮಾರಿಗೆ ತಾವು ನೆಲೆಸಿದ್ದ ಅಪಾರ್ಟ್‌ಮೆಂಟ್‌ನ ನಾಲ್ಕನೇ ಅಂತಸ್ತಿನಿಂದ ಕೆಳಕ್ಕೆ ಜಿಗಿದಿದ್ದಾರೆ ಎನ್ನಲಾಗಿದೆ. ಗಂಭೀರವಾಗಿ ಗಾಯಗೊಂಡಿದ್ದ ಅವರನ್ನು ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಮೃತಪಟ್ಟಿದ್ದರು.

ಕಳೆದ ಒಂದು ತಿಂಗಳಿಂದ ಶರದ್ ಅವರು ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದು, ಹಲವು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಘಟನೆಯ ದಿನವೂ ಚಿಕಿತ್ಸೆ ಪಡೆದು ಮನೆಗೆ ಮರಳಿದ್ದರು ಎನ್ನಲಾಗಿದೆ.

ಕೆಲಸಕ್ಕೆ ಸಂಬಂಧಿಸಿದ ಒತ್ತಡದಿಂದಾಗಿ ಶರದ್ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದರು ಎಂದು ಅವರ ಕುಟುಂಬದವರು ಪೊಲೀಸರಿಗೆ ತಿಳಿಸಿದ್ದಾರೆ. ಈ ಕುರಿತು ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ಪರಿಷತ್ ಚುನಾವಣೆ: ದಿಗ್ವಿಜಯದತ್ತ ಎನ್‌ಡಿಎ

**ಕರ್ನಾಟಕ ರಾಜ್ಯದ ನಾಲ್ಕು ವಿಧಾನಪರಿಷತ್ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ನಾಲ್ಕೂ ಕ್ಷೇತ್ರಗಳಲ್ಲಿ ದಿಗ್ವಿಜಯ ಸಾಧಿಸುವತ್ತ ಮುನ್ನುಗ್ಗಿರುವ ಬಿಜೆಪಿ–ಜೆಡಿಎಸ್‌ನ ಎನ್‌ಡಿಎ ಮೈತ್ರಿಕೂಟ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಮರ್ಮಾಘಾತ ನೀಡಿದೆ. ಬೆಂಗಳೂರು ಶಿಕ್ಷಕರ ಕ್ಷೇತ್ರ ಮತ್ತು ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಈಗಾಗಲೇ ಗೆದ್ದು ಬೀಗಿರುವ ಎನ್‌ಡಿಎ ಕೂಟ ಉಳಿದೆರಡೂ ಕ್ಷೇತ್ರಗಳಲ್ಲೂ ಗೆಲುವಿನತ್ತ ದಾಪುಗಾಲು ಹಾಕಿದೆ.**

## ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎಗೆ ಜಯ: ರಂಗನಾಥ್‌ಗೆ 908 ಮತಗಳ ಗೆಲುವು

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಉಪಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಎ.ಪಿ. ರಂಗನಾಥ್ ಅವರು ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಅವರನ್ನು 908 ಮತಗಳ ಅಂತರದಿಂದ ಸೋಲಿಸಿ ಗೆಲುವು ಸಾಧಿಸಿದ್ದಾರೆ. ನಗರದ ಡಾ. ಬಿ.ಆರ್. ಅಂಬೇಡ್ಕರ್ ರಸ್ತೆಯ ಸರ್ಕಾರಿ ಕಲಾ ಕಾಲೇಜಿನಲ್ಲಿ ನಡೆದ ಮತ ಎಣಿಕೆಯಲ್ಲಿ ರಂಗನಾಥ್ 10,810 ಮತಗಳನ್ನು ಪಡೆದರೆ, ಪುಟ್ಟಣ್ಣ 9,902 ಮತಗಳನ್ನು ಗಳಿಸಿದರು.

ಅ.23ರಂದು ನಡೆದ ಮತದಾನದಲ್ಲಿ ಕ್ಷೇತ್ರದ ಒಟ್ಟು 27,405 ಮತದಾರರ ಪೈಕಿ 22,468 ಮಂದಿ ಮತ ಚಲಾಯಿಸಿದ್ದರು. ಶೇ.81.98ರಷ್ಟು ಮತದಾನ ದಾಖಲಾಗಿತ್ತು. ಮತ ಎಣಿಕೆ ಪ್ರಕ್ರಿಯೆ ಸೋಮವಾರ ಬೆಳಗ್ಗೆ 8 ಗಂಟೆಗೆ ಆರಂಭವಾಯಿತು.

**ಆರಂಭಿಕ ಮುನ್ನಡೆ ಬಳಿಕ ಪುಟ್ಟಣ್ಣಗೆ ಹಿನ್ನಡೆ:** ಮೊದಲ ಸುತ್ತಿನಲ್ಲಿ ಪುಟ್ಟಣ್ಣ 176 ಮತಗಳ ಮುನ್ನಡೆ ಸಾಧಿಸಿದ್ದರು. ಆದರೆ ನಂತರದ ಸುತ್ತುಗಳಲ್ಲಿ ಮುನ್ನಡೆ ಕಾಯ್ದುಕೊಳ್ಳಲು ವಿಫಲರಾದರು. ಎರಡನೇ ಸುತ್ತಿನಲ್ಲಿ ರಂಗನಾಥ್ 361 ಮತಗಳ ಮುನ್ನಡೆ ಪಡೆದರೆ, ಮೂರನೇ ಸುತ್ತಿನಲ್ಲಿ ಅಂತರ 702ಕ್ಕೆ ಏರಿತು.

ಅಂತಿಮ ಸುತ್ತಿನಲ್ಲಿ 908 ಮತಗಳ ಅಂತರದ ಗೆಲುವು ರಂಗನಾಥ್ ಪಾಲಾಯಿತು. ಸೋಲು ಖಚಿತವಾಗುತ್ತಿದ್ದಂತೆ ಪುಟ್ಟಣ್ಣ ಮತ ಎಣಿಕೆ ಕೇಂದ್ರದಿಂದ ನಿರ್ಗಮಿಸಿದರು.

**ಕಾರ್ಯಕರ್ತರ ಸಂಭ್ರಮ:** ಗೆಲುವಿನ ಸುದ್ದಿ ತಿಳಿಯುತ್ತಿದ್ದಂತೆ ಎನ್‌ಡಿಎ ಕಾರ್ಯಕರ್ತರು ಮತ ಎಣಿಕೆ ಕೇಂದ್ರದ ಬಳಿ ಸಂಭ್ರಮಿಸಿದರು. ರಂಗನಾಥ್ ಅವರ ಪತ್ನಿ ಮತ್ತು ಮಕ್ಕಳು ಸಂತಸ ವ್ಯಕ್ತಪಡಿಸಿದರು. ಕಾರ್ಯಕರ್ತರು ಘೋಷಣೆಗಳನ್ನು ಕೂಗಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

**‘2028ರ ಚುನಾವಣೆಗೆ ದಿಕ್ಸೂಚಿ’:** ಗೆಲುವಿನ ಬಳಿಕ ಮಾತನಾಡಿದ ಎ.ಪಿ. ರಂಗನಾಥ್, “ಇದು ಎನ್‌ಡಿಎ ಕಾರ್ಯಕರ್ತರ ಗೆಲುವು. 2028ರ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ.



ನನ್ನ ವಿರುದ್ಧ ನಡೆದ ಅಪಪ್ರಚಾರಕ್ಕೆ ಮತದಾರರು ಉತ್ತರ ನೀಡಿದ್ದಾರೆ. ಹಿಂದೆ ನನ್ನ ಸೋಲನ್ನು ಕೆಲವರು ಸಂಭ್ರಮಿಸಿದ್ದರು. ಆದರೆ ನಾನು ಹಾಗೆ ಮಾಡುವುದಿಲ್ಲ.

ಇವಿಎಂ ಹ್ಯಾಕ್ ಎಂದು ಆರೋಪಿಸುತ್ತಿದ್ದವರಿಗೆ ಬ್ಯಾಲೆಟ್ ಮತದಾನದಲ್ಲಿನ ಈ ಗೆಲುವು ಉತ್ತರವಾಗಿದೆ” ಎಂದರು. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ದೂರವಾಣಿ ಕರೆ ಮಾಡಿ ಅಭಿನಂದಿಸಿದ್ದಾರೆ ಎಂದು ತಿಳಿಸಿದರು.

**1,857 ಮತಗಳು ತಿರಸ್ಕೃತ:** ಚುನಾವಣಾಧಿಕಾರಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಪ್ರಕಟಿಸಿರುವ ಮಾಹಿತಿಯಂತೆ, ಒಟ್ಟು 20,616 ಮತಗಳು ಮಾನ್ಯವಾಗಿದ್ದು, 1,857 ಮತಗಳು ತಿರಸ್ಕೃತಗೊಂಡಿವೆ. ಇತರ ಅಭ್ಯರ್ಥಿಗಳ ಪೈಕಿ ಕರ್ನಾಟಕ ರಾಷ್ಟ್ರ ಸಮಿತಿಯ ಡಾ. ಜಿ.ಆರ್. ಹೆಬ್ಬೂರು 94 ಮತ, ಪಕ್ಷೇತರ ಅಭ್ಯರ್ಥಿ ಉಮೇಶ್ ಬಾಬು ಪಿಳ್ಳೆಗೌಡ 215 ಮತ, ಬಿ.ಎಸ್. ನಾಗರಾಜು 11 ಮತ ಹಾಗೂ ಡಾ. ಎನ್. ಲಕ್ಷ್ಮಣ ಸ್ವಾಮಿ 24 ಮತಗಳನ್ನು ಪಡೆದಿದ್ದಾರೆ. ಮತ ಎಣಿಕೆ ಪ್ರಕ್ರಿಯೆ ಶಾಂತಿಯುತವಾಗಿ ಮುಕ್ತಾಯಗೊಂಡಿದೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

## ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ–2026: ಶಶೀಲ್ ನಮೋಶಿ ಗೆಲುವು

● ವಿಕ್ರಮ ವಾಹಿನಿ । ಬಳ್ಳಾರಿ



ಒಟ್ಟು ಕ್ಷೇತ್ರದ ಮತದಾರರು–34,784, ಮತ ಚಲಾಯಿಸಿದವರು–30,253, ಪ್ರಥಮ ಪ್ರಾಶಸ್ತ್ಯ ಮತ ಎಣಿಕೆಯ ಮೂರನೇ ಸುತ್ತಿನ ಎಣಿಕೆ ಮುಕ್ತಾಯ. ಒಟ್ಟು ಮತದಾನವಾದ 30,253 ಮತದಲ್ಲಿ 28,380 ಮತ ಸಿಂಧುವಾಗಿದ್ದು, 1,873 ಮತಗಳು ತಿರಸ್ಕೃತ ವಾಗಿವೆ. ಒಟ್ಟು ಸಿಂಧು ಮತಗಳಲ್ಲಿ ಶೇ.50+1 ರಂತೆ 14,191 ಮತಗಳು ವಿನ್ನಿಂಗ್ ಕೋಟಾ ಎಂದು ಗುರುತಿಸಲಾಯಿತು.

ಪ್ರಥಮ ಪ್ರಾಶಸ್ತ್ಯ ಮತ ಎಣಿಕೆಯಲ್ಲಿ ವಿನ್ನಿಂಗ್ ಕೋಟಾ ತಲುಪಿದ ಬಿ.ಜೆ.ಪಿ ಅಭ್ಯರ್ಥಿ ಶಶೀಲ ಜಿ. ನಮೋಶಿ.

**ಅಭ್ಯರ್ಥಿಗಳು ಪಡೆದ ಮತಗಳ ವಿವರ:** ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರ–12,299, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಶಶೀಲ್ ಜಿ. ನಮೋಶಿ–15,596, ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಸಾಯಬಣ್ಣಾ ಜಮಾದಾರ–40, ಜನತಾ ದಳ(ಸಂಯುಕ್ತ) ಪಕ್ಷದ ಅಭ್ಯರ್ಥಿ ಶಂಕರೆಡ್ಡಿ ಪಾಟೀಲ–44, ಪಕ್ಷೇತರ ಅಭ್ಯರ್ಥಿ ಕವಿರಾಜ ನಾಗಣ್ಣ ಮೋತಕಪಲ್ಲಿ– 49, ಪಕ್ಷೇತರ ಅಭ್ಯರ್ಥಿ ಟಿ.ಕೆ. ದಾಸರ– 06, ಪಕ್ಷೇತರ ಅಭ್ಯರ್ಥಿ ಮಹಬೂಬ್ ಮೊಹಮ್ಮದ ಖಾಜಾ ಹುಸೇನ್ ವಂಟೇಲಿ–10, ಪಕ್ಷೇತರ ಅಭ್ಯರ್ಥಿ ರಾಜಕುಮಾರ ಕೆ. ಕಲಬುರಗಿ–167, ಪಕ್ಷೇತರ ಅಭ್ಯರ್ಥಿ ರಾಜು ದೇವಪ್ಪ ಸೊನ್ನ–127. ಪಕ್ಷೇತರ ಅಭ್ಯರ್ಥಿ ಶರಣು ಪಿ. ಸುಗೂರು–13, ಪಕ್ಷೇತರ ಅಭ್ಯರ್ಥಿ ಶಶಿಧರ ಬಸವರಾಜ–04. ಪಕ್ಷೇತರ ಅಭ್ಯರ್ಥಿ ಶಿವಶಂಕರ ಅಣ್ಣಪ್ಪ ತರನಳ್ಳಿ–12 ಹಾಗೂ ಪಕ್ಷೇತರ ಅಭ್ಯರ್ಥಿ ಡಾ.ಸುರೇಶ ದಾವೀದಪ್ಪ–13 ಮತಗಳು ಪಡೆದಿದ್ದಾರೆ.

## *ಶಿಕ್ಷಣಕ್ಕಾಗಿ ರಕ್ತ ಮಾರಾಟಕ್ಕೆ ವಿದ್ಯಾರ್ಥಿಗಳ ಮೊರೆ*

● ವಿಕ್ರಮ ವಾಹಿನಿ । ಲಕ್ನೋ

*ಶಿಕ್ಷಣದ ಶುಲ್ಕ, ವಸತಿ ಮತ್ತು ಇತರ ವೆಚ್ಚಗಳನ್ನು ಭರಿಸಲು ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಕೆಲವು ವಿದ್ಯಾರ್ಥಿಗಳು ರಕ್ತ ಮಾರಾಟ ಮಾಡುತ್ತಿದ್ದಾರೆ ಎಂಬ ತನಿಖಾ ವರದಿ ಬೆಳಕಿಗೆ ಬಂದಿದೆ.*

*ಈ ವರದಿಯನ್ನು ಉಲ್ಲೇಖಿಸಿ ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಅವರು ರಾಜ್ಯದ ಬಿಜೆಪಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.*

*‘ಭಾಸ್ಕರ್ ಇಂಗ್ಲಿಷ್’ ವೆಬ್‌ಸೈಟ್‌ನ ತನಿಖಾ ವರದಿಯ ಪ್ರಕಾರ, ನೀಟ್ ಮತ್ತು ಎಸ್‌ಎಸ್‌ಸಿ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಕೆಲವು ವಿದ್ಯಾರ್ಥಿಗಳು ಕೋಚಿಂಗ್ ಶುಲ್ಕ ಹಾಗೂ ದೈನಂದಿನ ಖರ್ಚುಗಳನ್ನು ನಿಭಾಯಿಸಲು ರಕ್ತ ಮಾರಾಟದ ಮೊರೆ ಹೋಗುತ್ತಿದ್ದಾರೆ. ಕೆಲವರು ತಿಂಗಳಿಗೆ ಎರಡು ಬಾರಿ, ಇನ್ನು ಕೆಲವರು ನಾಲ್ಕು ಬಾರಿ ರಕ್ತ ಮಾರಾಟ ಮಾಡುತ್ತಿರುವುದಾಗಿ ವರದಿ ತಿಳಿಸಿದೆ.*

***ಕೃಷಿ ಆದಾಯ ಸಾಲದು; ವಿದ್ಯಾರ್ಥಿಗಳ ಪರದಾಟ***

*ರೈತ ಕುಟುಂಬದ ವಿದ್ಯಾರ್ಥಿಯೊಬ್ಬರು, ಕೃಷಿಯಿಂದ ಬರುವ ಆದಾಯ ಕುಟುಂಬದ ಖರ್ಚಿಗೆ ಸಾಕಾಗದ ಕಾರಣ ತಮ್ಮ ಶಿಕ್ಷಣದ ವೆಚ್ಚವನ್ನು ತಾವೇ ಭರಿಸಬೇಕಾಗಿದೆ ಎಂದು ವರದಿಗಾರರಿಗೆ ತಿಳಿಸಿದ್ದಾರೆ. ಕೆಲವೊಮ್ಮೆ ರಕ್ತ ಮಾರಾಟದಿಂದ ಬಂದ ಹಣವನ್ನು ಮನೆಗೂ ಕಳುಹಿಸುವುದಾಗಿ ಹೇಳಿದ್ದಾರೆ.*

*ಮತ್ತೊಬ್ಬ ವಿದ್ಯಾರ್ಥಿ, ಎರಡು ತಿಂಗಳಿಂದ ಹಾಸ್ಟೆಲ್ ಶುಲ್ಕ ಪಾವತಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಹಣ ಹೊಂದಿಸಲು ರಕ್ತ ಮಾರಾಟ ಮಾಡಬೇಕಾಯಿತು ಎಂದು ಅಳಲು ತೋಡಿಕೊಂಡಿದ್ದಾರೆ. ವಸತಿ ಕಳೆದುಕೊಂಡರೆ ಓದು ಮುಂದುವರಿಸುವುದು ಕಷ್ಟವಾಗುತ್ತದೆ ಎಂಬ ಆತಂಕವೂ ವಿದ್ಯಾರ್ಥಿಗಳಲ್ಲಿದೆ ಎಂದು ವರದಿ ವಿವರಿಸಿದೆ.*

*ಈ ವರದಿಯನ್ನು ಉಲ್ಲೇಖಿಸಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಅಖಿಲೇಶ್ ಯಾದವ್, ರಾಜ್ಯದಲ್ಲಿ ನಿರುದ್ಯೋಗ ಮತ್ತು ಉದ್ಯೋಗಾವಕಾಶಗಳ ಕೊರತೆ ತೀವ್ರವಾಗಿದೆ ಎಂದು ಆರೋಪಿಸಿದ್ದಾರೆ. ದೇಶದ ಸ್ವಾತಂತ್ರ್ಯಕ್ಕಾಗಿ ರಕ್ತ ಚೆಲ್ಲಿದ ಯುವಕರು ಇಂದು ನಿರುದ್ಯೋಗದ ಕಾರಣದಿಂದ ತಮ್ಮ ರಕ್ತವನ್ನೇ ಮಾರಾಟ ಮಾಡುವ ಪರಿಸ್ಥಿತಿ ಎದುರಿಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ.*

*ಬಿಜೆಪಿ ಆಡಳಿತ ಯುವಜನರ ಕನಸುಗಳನ್ನು ನುಚ್ಚುನೂರು ಮಾಡಿದೆ. ಉತ್ತರ ಪ್ರದೇಶದಲ್ಲಿ ನಿರುದ್ಯೋಗದ ಬಿಕ್ಕಟ್ಟು ಗಂಭೀರವಾಗಿದ್ದು, ಯುವಕರು ಈ ಆಡಳಿತಕ್ಕೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಅವರು ಹೇಳಿದ್ದಾರೆ.*

## ಮಾಂಜಾ ದಾರಕ್ಕೆ ಬಲಿಯಾಗುತ್ತಿರುವ ಜೀವಗಳು!

● ವಿಕ್ರಮ ವಾಹಿನಿ । ಬೆಂಗಳೂರು

ಗಾಳಿಪಟ ಹಾರಿಸಲು ಬಳಸುವ ಮಾಂಜಾ ದಾರ ಈಗ ಜನರ ಪಾಲಿಗೆ ಮೃತ್ಯುದಾರವಾಗಿ ಪರಿಣಮಿಸುತ್ತಿದೆ. ನೈಲಾನ್ ದಾರಕ್ಕೆ ಗಾಜಿನ ಪುಡಿ ಲೇಪಿಸಿ ತಯಾರಿಸುವ ಈ ಅಪಾಯಕಾರಿ ದಾರಕ್ಕೆ ಸಿಲುಕಿ ದ್ವಿಚಕ್ರ ವಾಹನ ಸವಾರರು, ಮಕ್ಕಳು ಗಾಯಗೊಳ್ಳುತ್ತಿದ್ದು, ಪ್ರಾಣಿ–ಪಕ್ಷಿಗಳ ಜೀವಕ್ಕೂ ಕಂಟಕವಾಗಿದೆ. ಸರಣಿ ದುರಂತಗಳ ನಡುವೆಯೂ ಮಾಂಜಾ ದಾರದ ಮಾರಾಟ ಮತ್ತು ಬಳಕೆಗೆ ಪರಿಣಾಮಕಾರಿ ಕಡಿವಾಣ ಹಾಕಲು ಸಾಧ್ಯವಾಗದಿರುವುದು ಆತಂಕ ಮೂಡಿಸಿದೆ.

ಕಳೆದ ಕೆಲವು ವರ್ಷಗಳಲ್ಲಿ ರಾಜ್ಯದ ವಿವಿಧೆಡೆ ಮಾಂಜಾ ದಾರಕ್ಕೆ ಸಿಲುಕಿ ಸಾವು ಸಂಭವಿಸಿದ ಘಟನೆಗಳು ವರದಿಯಾಗಿವೆ. 2023ರ ಜೂನ್ 4ರಂದು ಗದಗದಲ್ಲಿ 28 ವರ್ಷದ ಬೈಕ್ ಸವಾರ ಮೃತಪಟ್ಟಿದ್ದರು. 2025ರ ಅಕ್ಟೋಬರ್ 19ರಂದು ಮೂರು ವರ್ಷದ ಬಾಲಕಿ ಮೃತಪಟ್ಟಿದ್ದಳು. 2026ರ ಜನವರಿ 14ರಂದು ಬೀದರ್‌ನಲ್ಲಿ 48 ವರ್ಷದ ಬೈಕ್ ಸವಾರ ಸಾವನ್ನಪ್ಪಿದ್ದರೆ, ಅದೇ ವರ್ಷ ಜೂನ್ 2ರಂದು ಬೆಂಗಳೂರಿನಲ್ಲಿ ಬೈಕ್



ಸವಾರನೊಬ್ಬ ಮೃತಪಟ್ಟಿರುವುದಾಗಿ ಲಭ್ಯ ಮಾಹಿತಿ ತಿಳಿಸಿದೆ.

ಇತ್ತೀಚಿನ ತಿಂಗಳಲ್ಲಿಯೂ ಇಂತಹ ಘಟನೆಗಳು ವರದಿಯಾಗಿವೆ. ಅಕ್ಟೋಬರ್ 1ರಂದು ಬೆಳಗಾವಿಯಲ್ಲಿ 19 ವರ್ಷದ ಯುವಕ ಮೃತಪಟ್ಟಿದ್ದು, ಅಕ್ಟೋಬರ್ 8ರಂದು 38 ವರ್ಷದ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ಉಲ್ಲೇಖವಾಗಿದೆ. ಅಕ್ಟೋಬರ್ 18ರಂದು ಬೆಂಗಳೂರಿನಲ್ಲಿ ಬೈಕ್ ಸವಾರನೊಬ್ಬ ಗಂಭೀರವಾಗಿ ಗಾಯಗೊಂಡಿದ್ದು, ಅಕ್ಟೋಬರ್ 22ರಂದು ಮಹಿಳೆಯೊಬ್ಬರು ಮೃತಪಟ್ಟಿದ್ದು, ಮತ್ತೊಬ್ಬರು ಗಾಯಗೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ ಎಲ್ಲ ಪ್ರಕರಣಗಳಲ್ಲಿ ಮಾಂಜಾ ದಾರವೇ ಸಾವಿಗೆ ನೇರ ಕಾರಣ ಎಂಬುದನ್ನು ಅಧಿಕೃತ ದಾಖಲೆಗಳ ಮೂಲಕ ದೃಢಪಡಿಸಬೇಕಿದೆ.

**ಗಾಜಿನ ಪುಡಿ ಲೇಪನವೇ ಅಪಾಯ**

ಸಾಮಾನ್ಯ ದಾರಕ್ಕಿಂತ ಹೆಚ್ಚು ಹರಿತವಾಗಿರುವ ಮಾಂಜಾ ದಾರವನ್ನು ನೈಲಾನ್ ಅಥವಾ ಇತರ ದಾರಗಳಿಗೆ ಗಾಜಿನ ಪುಡಿ ಮಿಶ್ರಿತ ಲೇಪನ ಮಾಡುವ ಮೂಲಕ ತಯಾರಿಸಲಾಗುತ್ತದೆ. ಗಾಳಿಯಲ್ಲಿ ತೇಲುವ ಅಥವಾ ರಸ್ತೆ ಮೇಲೆ ಬಿದ್ದಿರುವ ಈ ದಾರ ದ್ವಿಚಕ್ರ ವಾಹನ ಸವಾರರ ಕುತ್ತಿಗೆಗೆ ಸಿಲುಕಿದರೆ ಗಂಭೀರ ಗಾಯವಾಗುವ ಅಪಾಯವಿದೆ. ವಾಹನ ವೇಗವಾಗಿ ಚಲಿಸುತ್ತಿರುವಾಗ ದಾರವನ್ನು ಗುರುತಿಸಿ ತಪ್ಪಿಸಿಕೊಳ್ಳಲು ಸಮಯ ಸಿಗುವುದಿಲ್ಲ. ಹೆಲ್ಮೆಟ್ ಧರಿಸಿದ್ದರೂ ಕುತ್ತಿಗೆ ಸೇರಿದಂತೆ ದೇಹದ ತೆರೆದ ಭಾಗಗಳಿಗೆ ಗಾಯವಾಗಬಹುದು.

**18 ಸಾವಿರಕ್ಕೂ ಹೆಚ್ಚು ಪ್ರಾಣಿ–ಪಕ್ಷಿಗಳಿಗೆ ಗಾಯ:** ಮಾಂಜಾ ದಾರದ ಅಪಾಯ ಮನುಷ್ಯರಿಗೆ ಮಾತ್ರ ಸೀಮಿತವಾಗಿಲ್ಲ. ಹಾರುವ ಪಕ್ಷಿಗಳು, ಮರಗಳಲ್ಲಿ ಕುಳಿತುಕೊಳ್ಳುವ ಹಕ್ಕಿಗಳು ಹಾಗೂ ಬೀದಿ ಪ್ರಾಣಿಗಳು ದಾರಕ್ಕೆ ಸಿಲುಕಿ ಗಾಯಗೊಳ್ಳುತ್ತಿವೆ. ಲಭ್ಯ ಅಂಕಿಅಂಶಗಳ ಪ್ರಕಾರ, 2019ರಿಂದ 2026ರ ಜೂನ್‌ವರೆಗೆ ಮಾಂಜಾ ದಾರದಿಂದ ಗಾಯಗೊಂಡ ಪ್ರಾಣಿ–ಪಕ್ಷಿಗಳ ಸಂಖ್ಯೆ 18,051ಕ್ಕೆ ತಲುಪಿದೆ.

2ನೇ ಪುಟಕ್ಕೆ...

## ವಾಯುಮಾಲಿನ್ಯಕ್ಕೆ ಕಾರ್ಮಿಕರ ಶ್ವಾಸಕೋಶ ದುರ್ಬಲ

● ವಿಕ್ರಮ ವಾಹಿನಿ । ಬೆಂಗಳೂರು

ನಗರದಲ್ಲಿ ವಾಯುಮಾಲಿನ್ಯಕ್ಕೆ ನಿರಂತರವಾಗಿ ಒಡ್ಡಿಕೊಳ್ಳುವ ಬಿಎಂಟಿಸಿ ಚಾಲಕರು, ಸಂಚಾರ ಪೊಲೀಸರು, ಪೌರಕಾರ್ಮಿಕರು ಮತ್ತು ನಿರ್ಮಾಣ ಕಾರ್ಮಿಕರಲ್ಲಿ ಶ್ವಾಸಕೋಶದ ಕಾರ್ಯಕ್ಷಮತೆ ಕುಂಠಿತವಾಗಿರುವುದು ಮೂರು ವರ್ಷಗಳ ಅಧ್ಯಯನದಲ್ಲಿ ಬೆಳಕಿಗೆ ಬಂದಿದೆ.

10 ಸಾವಿರಕ್ಕೂ ಹೆಚ್ಚು ಕಾರ್ಮಿಕರನ್ನು ಒಳಗೊಂಡ ಅಧ್ಯಯನದಲ್ಲಿ 4,517 ಬಿಎಂಟಿಸಿ ಚಾಲಕರು, 3,285 ಸಂಚಾರ ಪೊಲೀಸರು, 2,169 ನಿರ್ಮಾಣ ಕಾರ್ಮಿಕರು ಹಾಗೂ 379 ಪೌರಕಾರ್ಮಿಕರನ್ನು ಪರೀಕ್ಷಿಸಲಾಗಿದೆ. ಪೌರಕಾರ್ಮಿಕರಲ್ಲಿ ಶೇ.45ರಷ್ಟು ಮಂದಿಗೆ ಶ್ವಾಸಕೋಶದ ಕಾರ್ಯಕ್ಷಮತೆ ಕುಂಠಿತವಾಗಿರುವ ಲಕ್ಷಣಗಳು ಕಂಡುಬಂದಿವೆ. ಬಿಎಂಟಿಸಿ ಚಾಲಕರಲ್ಲಿ ಈ ಪ್ರಮಾಣ ಶೇ.29.5, ಸಂಚಾರ ಪೊಲೀಸರಲ್ಲಿ ಶೇ.28 ಹಾಗೂ



ನಿರ್ಮಾಣ ಕಾರ್ಮಿಕರಲ್ಲಿ ಶೇ.15ರಷ್ಟಿದೆ.

ಮಾಲಿನ್ಯದಿಂದ ರಕ್ಷಿಸಿಕೊಳ್ಳಲು ಮುಖಗವಸು ಬಳಕೆಯಲ್ಲೂ ನಿರ್ಲಕ್ಷ್ಯ ಕಂಡುಬಂದಿದೆ. ಶೇ.88.2ರಷ್ಟು ಬಿಎಂಟಿಸಿ ಚಾಲಕರು ತಾವು ಎಂದಿಗೂ ಮುಖಗವಸು ಬಳಸಿಲ್ಲ ಎಂದು ತಿಳಿಸಿದ್ದಾರೆ. ಸಂಚಾರ ಪೊಲೀಸರಲ್ಲಿ

**ವಾಯುಮಾಲಿನ್ಯಕ್ಕೆ ನಿರಂತರವಾಗಿ ಒಡ್ಡಿಕೊಳ್ಳುತ್ತಿರುವ ಬಿಎಂಟಿಸಿ ಚಾಲಕರು, ಸಂಚಾರ ಪೊಲೀಸರು, ಪೌರಕಾರ್ಮಿಕರು ಹಾಗೂ ನಿರ್ಮಾಣ ಕಾರ್ಮಿಕರಲ್ಲಿ ಶ್ವಾಸಕೋಶದ ಕಾರ್ಯಕ್ಷಮತೆ ಕುಂಠಿತವಾಗುತ್ತಿರುವುದು ಅಧ್ಯಯನದಲ್ಲಿ ಬಹಿರಂಗವಾಗಿದೆ.**

ಶೇ.55, ನಿರ್ಮಾಣ ಕಾರ್ಮಿಕರಲ್ಲಿ ಶೇ.37.9 ಹಾಗೂ ಪೌರಕಾರ್ಮಿಕರಲ್ಲಿ ಶೇ.16.3ರಷ್ಟು ಮಂದಿ ಮುಖಗವಸು ಬಳಸುವುದಿಲ್ಲ ಎಂದು ಅಧ್ಯಯನ ತಿಳಿಸಿದೆ.

ಶ್ವಾಸಕೋಶದ ಸಮಸ್ಯೆಗಳ ಜತೆಗೆ ಬೊಜ್ಜು, ಮಧುಮೇಹ ಮತ್ತು ಹೃದಯ ಸಂಬಂಧಿ ಕಾಯಿಲೆಗಳ ಅಪಾಯವೂ ಹೆಚ್ಚಿರುವುದು ವರದಿಯಾಗಿದೆ.

ಪೌರಕಾರ್ಮಿಕರಲ್ಲಿ ಶೇ.62, ಬಿಎಂಟಿಸಿ ಚಾಲಕರಲ್ಲಿ ಶೇ.60.7 ಹಾಗೂ ಸಂಚಾರ ಪೊಲೀಸರಲ್ಲಿ ಶೇ.51.3ರಷ್ಟು ಮಂದಿ ಅಧಿಕ ತೂಕ ಅಥವಾ ಬೊಜ್ಜಿನಿಂದ ಬಳಲುತ್ತಿದ್ದಾರೆ. ಬಿಎಂಟಿಸಿ ಚಾಲಕರಲ್ಲಿ ಮಧುಮೇಹದ ಪ್ರಮಾಣ ಶೇ.18.2ರಷ್ಟಿದೆ.

ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ 7,635 ಬಿಎಂಟಿಸಿ ನೌಕರರನ್ನು ಪರೀಕ್ಷಿಸಿದಾಗ ಶೇ.40ಕ್ಕೂ ಹೆಚ್ಚು ಮಂದಿಯಲ್ಲಿ ಹೃದಯರಕ್ತನಾಳದ ಕಾಯಿಲೆಗಳ ಅಪಾಯ ಕಂಡುಬಂದಿದೆ. ಕಾರ್ಮಿಕರ ಆರೋಗ್ಯ ರಕ್ಷಣೆಗೆ ನಿಯಮಿತ ವೈದ್ಯಕೀಯ ತಪಾಸಣೆ, ಸುರಕ್ಷತಾ ಸಾಧನಗಳ ಬಳಕೆ ಹಾಗೂ ಕೆಲಸದ ಸ್ಥಳಗಳಲ್ಲಿ ಮಾಲಿನ್ಯ ನಿಯಂತ್ರಣಕ್ಕೆ ಆದ್ಯತೆ ನೀಡುವ ಅಗತ್ಯವನ್ನು ಅಧ್ಯಯನ ಒತ್ತಿಹೇಳಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ಅವಕಾಶಗಳು ಎಂದಿಗೂ ಬಾಗಿಲು ತಟ್ಟುವುದಿಲ್ಲ. ನೀವು ಬಾಗಿಲು ತೆರೆದುಕೊಂಡು ತಾಳ್ಮೆಯಿಂದ ಕಾದರೆ ಮಾತ್ರ ಅವುಗಳು ನಿಮಗೆ ಸಿಗಬಲ್ಲದು.

## ದಿನ ಪಂಚಾಂಗ

ಅಕ್ಟೋಬರ್, 28–2026, ಬುಧವಾರ ಶರದ್ ಋತು, ಆಶ್ವಯುಜ ಮಾಸ, ಬಹುಳ ಪಕ್ಷ
ಬಿದಿಗೆ ತಿಥಿ ಬೆ.6:32, ತದಿಗೆ ತಿಥಿ ರಾ.4:23
ಕೃತ್ತಿಕ ನಕ್ಷತ್ರ ಸಾ.5:00, ರಾಹುಕಾಲ ಮ 12:03–1:31, ಚಾಮುಂಡೇಶ್ವರೀ ಶಯನೋತ್ಸವ, ಸಿಂದಗಿ ಬಿಂದಗಿ ಪೂಜೆ, ಹಿರೇ ಹಡಗಲಿ ಹಾಲಸ್ವಾಮಿ ರಥ, ಹಡಗಲಿ । ಸೋಗಿ ಬೆಟ್ಟದ ಮಲ್ಲೇಶ್ವರ ರಥ, ರಂಭಾಪುರಿ ಶ್ರೀ ವೀರಗಂಗಾಧರ ಜಗದ್ಗುರುಗಳ 38ನೇ ಪುಣ್ಯದಿನ, ಮಿಳಗಾತ್ರಿ ಜಾತ್ರೆ, ಮುದಿನೂರು ರಥ, ಇರಂಬಾವಿ ರಥ, ಬಾಳೆಕುಂದ್ರಿ ಮಹಾರಾಜ ಪುಣ್ಯದಿನ

# ಎಲಾನ್ ಮಸ್ಕ್‌ನ್ ಸ್ಟಾರ್ ಲಿಂಕ್‌ಗೆ ಭಾರತ ಪ್ರವೇಶಕ್ಕೆ ಅನುಮತಿ ನಿರಾಕರಣೆಯೇಕೆ?

**ಯುಕ್ರೇನ್‌ನ ಸ್ಟಾರ್‌ಲಿಂಕ್ ಅವಲಂಬನೆಯ ಪ್ರಸಂಗವನ್ನು ಮುಂದಿಟ್ಟುಕೊಂಡು, ರಾಷ್ಟ್ರೀಯ ಭದ್ರತೆಯಲ್ಲಿ ಸ್ವದೇಶಿ ನಿಯಂತ್ರಣ ಮತ್ತು ದತ್ತಾಂಶ ಸುರಕ್ಷತೆಯ ಮಹತ್ವವನ್ನು ಪ್ರತಿಪಾದಿಸಿರುವ ಬರಹ, ಕೇಂದ್ರ ಸರ್ಕಾರದ ನೀತಿಗಳನ್ನು ಸಮರ್ಥಿಸಿ ಪ್ರತಿಪಕ್ಷಗಳ ನಿಲುವನ್ನು ಟೀಕಿಸಿದೆ.**




"ಭಾರತ ಸರ್ಕಾರ ಎಲಾನ್ ಮಸ್ಕ್‌ಗೆ ಹೆದರುತ್ತಿದೆ, ಸ್ಯಾಟಲೈಟ್ ಇಂಟರ್ನೆಟ್‌ಗೆ ತಡೆಯೊಡ್ಡುತ್ತಿದೆ" ಎಂದು ಕೂಗಾಡುತ್ತಿದ್ದ ಕಾಂಗ್ರೆಸ್, ಎಡಚರರು, ಮತ್ತು ದೇಶ ತುಂಡರಿಸುತ್ತೇವೆ ಎಂದ ಗ್ಯಾಂಗಿಗೆ ಒಂದೇ ರಾತ್ರಿಯಲ್ಲಿ ಯುಕ್ರೇನಿನಲ್ಲಿ ನಡೆದದ್ದೇನು ಅಂತ ಗೊತ್ತಾಗಿರಬೇಕು. ಇಲ್ಲ, ಜರೂರು ಗೊತ್ತಾಗಬೇಕು.

ಯುಕ್ರೇನ್ ತನ್ನ ರಕ್ಷಣಾ ಪಡೆಗಳು, ಆಟೋಮ್ಯಾಟಿಕ್ ಏರ್ ಡಿಫೆನ್ಸ್ ಮತ್ತು ದಾಳಿ ಮಾಡುವ ಡ್ರೋನ್‌ಗಳಿಗಾಗಿ ಸಂಪೂರ್ಣವಾಗಿ ಮಸ್ಕ್ ಅವರ 'ಸ್ಟಾರ್‌ಲಿಂಕ್' ಇಂಟರ್ ನೆಟ್ ಅನ್ನೇ ನಂಬಿಕೊಂಡಿತ್ತು. ಆದರೆ ನಾಕು ದಿನದ ಹಿಂದೆ ಒಂದು ರಾತ್ರೆ ಯಾವುದೇ ಮುನ್ಸೂಚನೆ ನೀಡದೆ ಸ್ಪೇಸ್ ಎಕ್ಸ್ ಸಂಸ್ಥೆಯು ಯುಕ್ರೇನ್‌ನ ಸ್ಟಾರ್ ಲಿಂಕ್ ಸಂಪರ್ಕದ ಮೇಲೆ ಟೆಗೆ 160 ಕಿ.ಮೀ ವೇಗದ ಮಿತಿಯನ್ನು ಹೇರಿಬಿಟ್ಟಿತು!

ಇದರಿಂದಾದ ಪರಿಣಾಮವೇನು ಗೊತ್ತೇನು? ಗಂಟೆಗೆ 160 ಕಿ.ಮೀ ಗಿಂತ ವೇಗವಾಗಿ ಹಾರುತ್ತಿದ್ದ ಯುಕ್ರೇನಿನ ರಕ್ಷಣಾ ಡ್ರೋನ್‌ಗಳು ಮತ್ತು ಮಿಸ್ಸೈಲ್ ಪತ್ತೆ ಹಚ್ಚುವ ಸಿಸ್ಟಮ್‌ಗಳ ಇಂಟರ್ನೆಟ್ ಸಂಪರ್ಕ ಒಮ್ಮೆಲೇ ಕಟ್ ಆಗಿಬಿಟ್ಟಿತು! ಯುಕ್ರೇನಿನ ಪ್ರಮುಖ ರಕ್ಷಣಾ ಮಿಷನ್‌ಗಳು ಅರ್ಧದಲ್ಲೇ ವಿಫಲವಾಗಿ, ಅವರ ಇಡೀ ನೆಟ್‌ವರ್ಕ್ ಕುಸಿದೇ ಬಿಟ್ಟಿತು. ಯುಕ್ರೇನ್ ತನ್ನ ಭದ್ರತೆಗೆ ವಿದೇಶಿ ಖಾಸಗಿ ಕಂಪನಿಯನ್ನು ನಂಬಿಕೊಂಡು ಅಸಹಾಯಕವಾಗಿ ನಿಂತಿದ್ದನ್ನು ಜಗತ್ತೇ ನೋಡುವಂತಾಯಿತು.

**ಇಂಥದ್ದಕ್ಕೆ ಭಾರತ ಅವಕಾಶ ಕೊಡಬೇಕೇ? ಇಂಥ 'ಡ್ರಾಮಾ' ನಡೆಸಲು ಎಲಾನ್ ಮಸ್ಕಗೆ ಮೋದಿ ಬಿಡುತ್ತಿಲ್ಲ!:** ಅಂದು ಕೇಂದ್ರ ಸರ್ಕಾರ ಹೇರಿದ ಕಟ್ಟುನಿಟ್ಟಿನ 'ಡಾಟಾ ಲೋಕಲೈಸೇಶನ್' ಹಾಗೂ 'ನ್ಯಾಷನಲ್ ಸೆಕ್ಯುರಿಟಿ' ಪ್ರೋಟೋಕಾಲ್‌ಗಳನ್ನು ವಿಪಕ್ಷಗಳು ಟೀಕಿಸಿದ್ದವು. ಆದರೆ ಇಂದು ಯುಕ್ರೇನ್ ಅನುಭವಿಸುತ್ತಿರುವ ನರಕವನ್ನು ನೋಡಿದರೆ, ಭಾರತದ '56 ಇಂಚಿನ ಎದೆಗಾರಿಕೆ' ಮತ್ತು ದೂರದೃಷ್ಟಿ ದೇಶವನ್ನು ಎಂತಹ ಅಪಾಯದಿಂದ ರಕ್ಷಿಸಿದೆ ಎಂಬುದು ಅರ್ಥವಾಗುತ್ತದೆ!

ಇನ್ನಾದರೂ ನಮ್ಮ ದೇಶದ ವಿಪಕ್ಷಗಳು, ಎಡಚರರು, ಕಮ್ಯುನಿಸ್ಟರು ವಿದೇಶಿ ಕಂಪನಿಗಳ ಪರ ವಕಾಲತ್ತು ವಹಿಸುವುದನ್ನು ಬಿಟ್ಟು, ರಾಷ್ಟ್ರೀಯ ಭದ್ರತೆಯ ವಿಷಯದಲ್ಲಿ ಪ್ರಸಕ್ತ ಕೇಂದ್ರ ಸರ್ಕಾರ ತೆಗೆದುಕೊಂಡ ದೃಢ ನಿರ್ಧಾರವನ್ನು ಶ್ಲಾಘಿಸಲಿ! ಸುಳ್ಳುಗಳ ಸೌಧವನ್ನು ಕಟ್ಟಿಕೊಂಡು, ಅದರೊಳಗೆ ಎಷ್ಟು ಜನರನ್ನು ಕೂಡಿಸಿಕೊಂಡು ಎಷ್ಟು ಕಾಲ ಸುಳ್ಳಿನ ಬದುಕನ್ನು ನಡೆಸಲು ಸಾಧ್ಯ? ರಾಷ್ಟ್ರನಿಷ್ಠೆ ಮತ್ತು ರಾಷ್ಟ್ರೀಯ ಬದ್ಧತೆಯ ಅಭಿವ್ಯಕ್ತಿಯನ್ನು ಇನ್ನಾದರೂ ಅಭಿವ್ಯಕ್ತಿಸಿದರೆ ದೇಶವಾಸಿಗಳಲ್ಲಿ ನಂಬಿಕೆ ಹುಟ್ಟೀತು! ಆವರಿಸಿಕೊಂಡ ಭ್ರಮೆ ಮತ್ತು ಸೋಲಿನ ಹತಾಶೆಯಿಂದ ಹೊರಬರುವ ಮೊದಲು ಜನತೆಯ ವಿಶ್ವಾಸವನ್ನು ಮೋದಿಯ ವಿರೋಧಿಗಳು ಗಳಿಸಬೇಕಿದೆ. ನೆನಪಿಡಬೇಕಾದುದು ಏನೆಂದರೆ, ಮೋದಿ ಇರುವುದೇ ಹಾಗೆ; ಅವರ ರಾಜನೀತಿ ಮತ್ತು ರಾಜಧರ್ಮ ನಿಂತಿರುವುದೇ ಬಲವಾದ ನೈತಿಕ ಅಡಿಪಾಯದ ಮೇಲೆ!

## ಆರೋಗ್ಯ

# ಹೃದಯ, ಕಿಡ್ನಿ ಔಷಧಗಳ ದರ ಇಳಿಕೆಗೆ ರಾಜ್ಯದ ಮನವಿ

ಕ್ಯಾನ್ಸರ್ ಔಷಧಗಳ ಬೆಲೆ ನಿಯಂತ್ರಣದ ಬಳಿಕ ಇದೀಗ ಹೃದಯ ಮತ್ತು ಮೂತ್ರಪಿಂಡ ಕಾಯಿಲೆಗಳ ಚಿಕಿತ್ಸೆಗೆ ಬಳಸುವ ದುಬಾರಿ ಔಷಧಗಳ ದರ ನಿಯಂತ್ರಣಕ್ಕೂ ರಾಜ್ಯದ ಔಷಧ ಆಡಳಿತ ಇಲಾಖೆ ಮುಂದಾಗಿದೆ. ದೀರ್ಘಕಾಲ ಚಿಕಿತ್ಸೆ ಪಡೆಯಬೇಕಾದ ರೋಗಿಗಳ ಮೇಲಿನ ಆರ್ಥಿಕ ಹೊರೆಯನ್ನು ತಗ್ಗಿಸುವ ಉದ್ದೇಶದಿಂದ ಅಗತ್ಯ ಔಷಧಗಳ ಪಟ್ಟಿ ಸಿದ್ಧಪಡಿಸಿ, ಅವುಗಳನ್ನು ಬೆಲೆ ನಿಯಂತ್ರಣದ ವ್ಯಾಪ್ತಿಗೆ ತರುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಇಲಾಖೆ ಚಿಂತನೆ ನಡೆಸಿದೆ.

ಹೃದಯ ಸಂಬಂಧಿ ಕಾಯಿಲೆಗಳು ಹಾಗೂ ದೀರ್ಘಕಾಲದ ಮೂತ್ರಪಿಂಡ ಸಮಸ್ಯೆಗಳಿಗೆ ಒಳಗಾದವರು ಹಲವು ವರ್ಷಗಳ ಕಾಲ ನಿರಂತರವಾಗಿ ಔಷಧ ಸೇವಿಸಬೇಕಾಗುತ್ತದೆ. ಪ್ರತಿದಿನ ಬಳಸುವ ಔಷಧಗಳ ವೆಚ್ಚವು ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಆರ್ಥಿಕ ಹೊರೆಯಾಗಿ ಪರಿಣಮಿಸುತ್ತಿದೆ. ವಿಶೇಷವಾಗಿ ಹೃದಯ ವೈಫಲ್ಯ, ರಕ್ತದೊತ್ತಡ, ಹೃದಯ ಬಡಿತದ ಸಮಸ್ಯೆಗಳು ಹಾಗೂ ಮೂತ್ರಪಿಂಡ ವೈಫಲ್ಯದಿಂದ ಬಳಲುವವರಿಗೆ ಚಿಕಿತ್ಸೆಯ ವೆಚ್ಚದ ಜತೆಗೆ ಔಷಧಗಳ ಖರ್ಚು ಕೂಡ ದೊಡ್ಡ ಸವಾಲಾಗಿದೆ. ಈ ಹಿನ್ನೆಲೆಯಲ್ಲಿ ಔಷಧಗಳ ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವ ಅಗತ್ಯವನ್ನು ರಾಜ್ಯದ ಇಲಾಖೆ ಮುಂದಿಟ್ಟಿದೆ.



**ಹೃದಯದ ಔಷಧಗಳ ಬೆಲೆ ಪರಿಶೀಲನೆ:** ರಕ್ತದೊತ್ತಡ ನಿಯಂತ್ರಣ, ಹೃದಯ ವೈಫಲ್ಯದ ಚಿಕಿತ್ಸೆ, ಹೃದಯ ಬಡಿತವನ್ನು ನಿಯಂತ್ರಿಸುವುದು ಹಾಗೂ ರಕ್ತ ಹೆಪ್ಪುಗಟ್ಟುವುದನ್ನು ತಡೆಯಲು ಬಳಸುವ ಔಷಧಗಳ ಬೆಲೆ ಕುರಿತು ಮಾಹಿತಿ ಸಂಗ್ರಹಿಸಲು ಇಲಾಖೆ ಮುಂದಾಗಿದೆ. ಹೃದಯಾಘಾತದ ನಂತರ ರೋಗಿಗಳಿಗೆ ನೀಡುವ ಔಷಧಗಳು ಸೇರಿದಂತೆ ದೀರ್ಘಕಾಲ ಬಳಸಬೇಕಾದ ಅಗತ್ಯ ಔಷಧಗಳ ಖರೀದಿ ವೆಚ್ಚ ಮತ್ತು ಮಾರುಕಟ್ಟೆಯಲ್ಲಿನ ಮಾರಾಟ ದರಗಳ ನಡುವಿನ ವ್ಯತ್ಯಾಸವನ್ನೂ ಪರಿಶೀಲಿಸುವ ಉದ್ದೇಶ ಹೊಂದಿದೆ.

ಔಷಧಗಳ ಉತ್ಪಾದನಾ ವೆಚ್ಚ, ಪೂರೈಕೆ ಹಾಗೂ ಮಾರಾಟ ದರಗಳ ಕುರಿತು ಲಭ್ಯವಾಗುವ ಮಾಹಿತಿಯ ಆಧಾರದಲ್ಲಿ ಯಾವ ಔಷಧಗಳ ಬೆಲೆ ನಿಯಂತ್ರಣ ಅಗತ್ಯವಿದೆ ಎಂಬುದನ್ನು ಗುರುತಿಸಲು ಉದ್ದೇಶಿಸಲಾಗಿದೆ. ಈ ಮೂಲಕ ರೋಗಿಗಳಿಗೆ ಹೆಚ್ಚಿನ ಆರ್ಥಿಕ ಹೊರೆ ಉಂಟುಮಾಡುತ್ತಿರುವ ಔಷಧಗಳನ್ನು ಗುರುತಿಸಿ, ಅವುಗಳ ದರ ಇಳಿಕೆಗೆ ಕೇಂದ್ರದ ಗಮನ ಸೆಳೆಯಲು ಯೋಜಿಸಲಾಗಿದೆ.

**ಕಿಡ್ನಿ ರೋಗಿಗಳು, ಡಯಾಲಿಸಿಸ್ ಪಡೆಯುವವರಿಗೂ ನೆರವಿನ ನಿರೀಕ್ಷೆ:** ದೀರ್ಘಕಾಲದ ಮೂತ್ರಪಿಂಡ ಕಾಯಿಲೆಯಿಂದ ಬಳಲುವವರು ನಿರಂತರ ಚಿಕಿತ್ಸೆ ಹಾಗೂ ಔಷಧ ಸೇವನೆಗೆ ಅವಲಂಬಿತರಾಗಿರುತ್ತಾರೆ. ಅದರಲ್ಲೂ ಡಯಾಲಿಸಿಸ್ ಮಾಡಿಸಿಕೊಳ್ಳುವ ರೋಗಿಗಳಿಗೆ ಚಿಕಿತ್ಸೆಯ ವೆಚ್ಚದ ಜತೆಗೆ ಅಗತ್ಯ ಔಷಧಗಳ ಖರ್ಚನ್ನೂ ಭರಿಸುವುದು ಕಷ್ಟವಾಗುತ್ತಿದೆ. ಹೀಗಾಗಿ ಮೂತ್ರಪಿಂಡ ಕಾಯಿಲೆಗಳ ಚಿಕಿತ್ಸೆಗೆ ಬಳಸುವ ಔಷಧಗಳು ಹಾಗೂ ಡಯಾಲಿಸಿಸ್ ರೋಗಿಗಳಿಗೆ ಅಗತ್ಯವಿರುವ ಔಷಧಗಳ ಬೆಲೆಗಳ ಬಗ್ಗೆಯೂ ಮಾಹಿತಿ ಸಂಗ್ರಹಿಸಲು ಇಲಾಖೆ ಉದ್ದೇಶಿಸಿದೆ.

ಈ ಔಷಧಗಳ ಪಟ್ಟಿ ಸಿದ್ಧಪಡಿಸಿದ ಬಳಿಕ ರಾಷ್ಟ್ರೀಯ ಔಷಧ ಬೆಲೆ ನಿಗಾ ಪ್ರಾಧಿಕಾರಕ್ಕೆ (ಎನ್‌ಪಿಪಿಎ) ಮನವಿ ಸಲ್ಲಿಸಿ, ಅಗತ್ಯ ಔಷಧಗಳನ್ನು ಬೆಲೆ ನಿಯಂತ್ರಣದ ವ್ಯಾಪ್ತಿಗೆ ತರುವಂತೆ ಒತ್ತಾಯಿಸುವ ಸಾಧ್ಯತೆಯಿದೆ. ಇದರಿಂದ ದೀರ್ಘಕಾಲ ಚಿಕಿತ್ಸೆ ಪಡೆಯುವ ರೋಗಿಗಳಿಗೆ ಔಷಧ ವೆಚ್ಚದಲ್ಲಿ ಪರಿಹಾರ ದೊರೆಯುವ ನಿರೀಕ್ಷೆಯಿದೆ.

**ಕೇಂದ್ರದ ನಿರ್ಧಾರದತ್ತ ರೋಗಿಗಳ ಚಿತ್ತ:** ಔಷಧಗಳ ಬೆಲೆ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಮತ್ತು ಎನ್‌ಪಿಪಿಎ ಕೈಗೊಳ್ಳುವ ಕ್ರಮಗಳು ನಿರ್ಣಾಯಕವಾಗಲಿವೆ. ರಾಜ್ಯದಿಂದ ಸಲ್ಲಿಕೆಯಾಗುವ ಮನವಿಯ ಆಧಾರದಲ್ಲಿ ಯಾವ ಔಷಧಗಳನ್ನು ಬೆಲೆ ನಿಯಂತ್ರಣದ ವ್ಯಾಪ್ತಿಗೆ ತರಲಾಗುತ್ತದೆ ಹಾಗೂ ಅವುಗಳ ದರದಲ್ಲಿ ಎಷ್ಟು ಇಳಿಕೆಯಾಗಬಹುದು ಎಂಬುದು ಮುಂದಿನ ಹಂತದಲ್ಲಿ ಸ್ಪಷ್ಟವಾಗಲಿದೆ.

ಕ್ಯಾನ್ಸರ್ ಔಷಧಗಳ ಬೆಲೆ ನಿಯಂತ್ರಣದ ಬಳಿಕ ಹೃದಯ ಮತ್ತು ಮೂತ್ರಪಿಂಡ ಕಾಯಿಲೆಗಳ ಔಷಧಗಳ ದರ ಇಳಿಕೆಗೂ ಕ್ರಮ ಕೈಗೊಳ್ಳುವ ಪ್ರಯತ್ನ ರೋಗಿಗಳಲ್ಲಿ ನಿರೀಕ್ಷೆ ಮೂಡಿಸಿದೆ. ಆದರೆ, ಪ್ರಸ್ತುತ ಇದು ಔಷಧಗಳ ಪಟ್ಟಿ ಸಿದ್ಧಪಡಿಸಿ ಕೇಂದ್ರಕ್ಕೆ ಮನವಿ ಸಲ್ಲಿಸುವ ಹಂತದಲ್ಲಿದ್ದು, ದರ ನಿಯಂತ್ರಣದ ಅಂತಿಮ ನಿರ್ಧಾರ ಕೇಂದ್ರದ ಮಟ್ಟದಲ್ಲಿ ಆಗಬೇಕಿದೆ.

ಇದಲ್ಲದೆ, ಔಷಧಗಳ ಬೆಲೆ ನಿಯಂತ್ರಣದ ಜತೆಗೆ ಗುಣಮಟ್ಟದ ಔಷಧಗಳು ಕೈಗೆಟುಕುವ ದರದಲ್ಲಿ ಲಭ್ಯವಾಗುವಂತೆ ಮಾಡುವುದೂ ಮುಖ್ಯವಾಗಿದೆ. ಒಂದೇ ಔಷಧದ ವಿವಿಧ ಬ್ರ್ಯಾಂಡ್‌ಗಳ ನಡುವೆ ಬೆಲೆಯಲ್ಲಿ ವ್ಯತ್ಯಾಸವಿರುವುದರಿಂದ ರೋಗಿಗಳು ಔಷಧ ಖರೀದಿಸುವಾಗ ಹೆಚ್ಚಿನ ಹಣ ವ್ಯಯಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಅಗತ್ಯ ಔಷಧಗಳ ದರ ಮತ್ತು ಮಾರುಕಟ್ಟೆಯಲ್ಲಿನ ಲಭ್ಯತೆ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸುವುದು ರೋಗಿಗಳ ಹಿತದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಲಿದೆ.

ಔಷಧಗಳ ದರ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಂಡರೆ ರೋಗಿಗಳ ಕುಟುಂಬಗಳ ಮೇಲಿನ ಆರ್ಥಿಕ ಒತ್ತಡ ಕಡಿಮೆಯಾಗುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ರಾಜ್ಯದ ಮನವಿ ಮತ್ತು ಕೇಂದ್ರದ ಮುಂದಿನ ನಿರ್ಧಾರಗಳ ಬಗ್ಗೆ ರೋಗಿಗಳು ಹಾಗೂ ಆರೋಗ್ಯ ಕ್ಷೇತ್ರದ ವಲಯಗಳು ನಿರೀಕ್ಷೆಯಿಂದ ಕಾಯುತ್ತಿವೆ.

# ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾ ವಚನ ಬೋಧನೆ



● ವಿಕ್ರಮ ವಾಹಿನಿ । ಬೆಂಗಳೂರು

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಆಚರಿಸಲಾಗುತ್ತಿರುವ ಜಾಗೃತಿ ಅರಿವು ಸಪ್ತಾಹದ ಅಂಗವಾಗಿ ವಿಕಾಸ ಸೌಧದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಸಚಿವಾಲಯದ ಅಧಿಕಾರಿಗಳು ಹಾಗೂ ನೌಕರರಿಗೆ ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾ ವಚನ ಬೋಧಿಸಿದರು.

ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಪ್ರಾಮಾಣಿಕತೆ ಹಾಗೂ ಹೊಣೆಗಾರಿಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಭ್ರಷ್ಟಾಚಾರ ವಿರೋಧಿ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ಸರ್ಕಾರದ ಹಿರಿಯ ಅಧಿಕಾರಿಗಳಾದ ಪಂಕಜ್ ಕುಮಾರ್ ಪಾಂಡೆ, ಮನೋಜ್ ಕುಮಾರ್ ಮೀನಾ, ಜಗದೀಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಚಿವಾಲಯದ ನೌಕರರು ಉಪಸ್ಥಿತರಿದ್ದರು.

# ಮಾಂಜಾ ದಾರಕ್ಕೆ ಬಲಿಯಾಗುತ್ತಿರುವ ಜೀವಗಳು!

1ನೇ ಪುಟದಿಂದ

2019ರಲ್ಲಿ 349 ಪ್ರಕರಣಗಳು ವರದಿಯಾಗಿದ್ದರೆ, 2020ರಲ್ಲಿ 1,323, 2021ರಲ್ಲಿ 3,072, 2022ರಲ್ಲಿ 2,381, 2023ರಲ್ಲಿ 2,678 ಹಾಗೂ 2024ರಲ್ಲಿ 2,648 ಪ್ರಕರಣಗಳು ದಾಖಲಾಗಿವೆ. 2025ರಲ್ಲಿ ಗರಿಷ್ಠ 3,614 ಪ್ರಕರಣಗಳು ವರದಿಯಾಗಿದ್ದು, 2026ರ ಜೂನ್‌ವರೆಗೆ 1,986 ಪ್ರಕರಣಗಳು ದಾಖಲಾಗಿವೆ ಎಂದು ಅಂಕಿಅಂಶಗಳು ತಿಳಿಸಿವೆ.

**ಬೆಂಗಳೂರಿನಲ್ಲೂ ಆತಂಕ:** ರಾಜಧಾನಿಯಲ್ಲಿಯೂ ಮಾಂಜಾ ದಾರಕ್ಕೆ ಸಂಬಂಧಿಸಿದ ಪ್ರಕರಣಗಳು ಆತಂಕ ಮೂಡಿಸಿವೆ. ಲಭ್ಯ ಅಂಕಿಅಂಶಗಳ ಪ್ರಕಾರ, 2023ರಲ್ಲಿ 613 ಪ್ರಕರಣಗಳು ದಾಖಲಾಗಿದ್ದರೆ, 2024ರಲ್ಲಿ 469 ಹಾಗೂ 2025ರಲ್ಲಿ 790 ಪ್ರಕರಣಗಳು ವರದಿಯಾಗಿವೆ. 2026ರಲ್ಲಿ ಇದುವರೆಗೆ 422 ಪ್ರಕರಣಗಳು ದಾಖಲಾಗಿವೆ ಎಂದು ಮಾಹಿತಿ ತಿಳಿಸಿದೆ.

**ನಿಷೇಧವಿದ್ದರೂ ನಿಯಂತ್ರಣವೇಕಿಲ್ಲ?:** ಅಪಾಯಕಾರಿ ಮಾಂಜಾ ದಾರದ ಮಾರಾಟ, ಸಂಗ್ರಹ ಮತ್ತು ಬಳಕೆಯನ್ನು ತಡೆಯಲು ನಿರಂತರ ಕ್ರಮ ಅಗತ್ಯವಾಗಿದೆ. ಹಬ್ಬದ ಸಂದರ್ಭಗಳಲ್ಲಿ ಮಾತ್ರ ಪರಿಶೀಲನೆ ನಡೆಸುವುದು ಅಥವಾ ಜಾಗೃತಿ ಮೂಡಿಸುವುದರಿಂದ ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯುವುದಿಲ್ಲ. ಅಂಗಡಿಗಳ ತಪಾಸಣೆ, ಆನ್‌ಲೈನ್ ಮಾರಾಟದ ಮೇಲೆ ನಿಗಾ, ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಬಿದ್ದಿರುವ ದಾರವನ್ನು ತೆರವುಗೊಳಿಸುವ ಕಾರ್ಯಗಳು ನಿರಂತರವಾಗಿ ನಡೆಯಬೇಕು. ಗಾಳಿಪಟ ಹಾರಿಸುವವರೂ ಸುರಕ್ಷಿತ ದಾರವನ್ನೇ ಬಳಸುವ ಜವಾಬ್ದಾರಿ ಹೊಂದಿದ್ದಾರೆ. ಜನರ ಜೀವ, ಮಕ್ಕಳ ಸುರಕ್ಷತೆ ಮತ್ತು ಪ್ರಾಣಿ–ಪಕ್ಷಿಗಳ ರಕ್ಷಣೆಯ ದೃಷ್ಟಿಯಿಂದ ಮಾಂಜಾ ದಾರದ ಮಾರಾಟ ಹಾಗೂ ಬಳಕೆಗೆ ಪರಿಣಾಮಕಾರಿ ಕಡಿವಾಣ ಹಾಕಬೇಕಿದೆ.

ಸರಣಿ ದುರಂತಗಳ ನಡುವೆಯೂ ಈ ಅಪಾಯ ಮುಂದುವರಿಯುತ್ತಿರುವುದರಿಂದ, ನಿಯಮಗಳ ಜಾರಿಯಲ್ಲಿ ಎಲ್ಲಿ ಲೋಪವಾಗುತ್ತಿದೆ ಎಂಬುದಕ್ಕೆ ಸಂಬಂಧಪಟ್ಟ ಇಲಾಖೆಗಳು ಉತ್ತರಿಸಬೇಕಿದೆ. ಶಾಲಾ–ಕಾಲೇಜುಗಳು, ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಗಳು ಜಂಟಿಯಾಗಿ ಜಾಗೃತಿ ಅಭಿಯಾನ ಕೈಗೊಂಡು, ಅಪಾಯಕಾರಿ ದಾರದ ಬಳಕೆಯಿಂದ ಉಂಟಾಗುವ ಅನಾಹುತಗಳ ಬಗ್ಗೆ ಜನರಿಗೆ ತಿಳಿಸಬೇಕು.

# ಬೊಗಳೆ ಭಾಷಣಕ್ಕೆ ಸೀಮಿತ ಸರಕಾರ: ಸುನೀಲ್‌ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರಕಾರವು ಬೊಗಳೆ ಭಾಷಣಗಳಿಗೆ ಮಾತ್ರ ಸೀಮಿತವಾಗಿದೆ ಎಂದು ಶಾಸಕ ಮತ್ತು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್ ಅವರು ಟೀಕಿಸಿದ್ದಾರೆ.



ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ಸರಕಾರವು ಯಾವುದೇ ಹೊಸ ಯೋಜನೆ ಘೋಷಿಸಲು ಅವಕಾಶ ಇಲ್ಲ ಎಂದು ಹಣಕಾಸು ಇಲಾಖೆಯು ಸರಕಾರಕ್ಕೆ ಎಚ್ಚರಿಕೆ ಪತ್ರ ಬರೆದಿದೆ. ಬರಗಾಲ ಪರಿಹಾರಧನವಾಗಿ ರೈತರಿಗೆ 2500 ರೂ. ಸರಕಾರ ಘೋಷಿಸಿದ್ದರೂ ಇವತ್ತಿನತನಕ ಯಾವುದೇ ರೈತರ ಖಾತೆಗೆ ಹಣ ವರ್ಗಾಯಿಸಿಲ್ಲ ಎಂದು ಆಕ್ಷೇಪಿಸಿದರು.

ಹಣ ಸಂದಾಯ ಆಗದೇ ಇರುವುದರ ಬಗ್ಗೆ ಸ್ವತಃ ಕಂದಾಯ ಸಚಿವರೇ ಬೇಸರವನ್ನು ವ್ಯಕ್ತಪಡಿಸಿದ್ದಾರೆ. ನಮ್ಮ ಸರ್ಕಾರ ದಿವಾಳಿಯಾಗಿದೆ ಅನ್ನೋದನ್ನ ಪರೋಕ್ಷವಾಗಿ ಅವರು ಒಪ್ಪಿಕೊಂಡಿದ್ದಾರೆ ಎಂದು ನುಡಿದರು. ಮುಖ್ಯಮಂತ್ರಿಗಳು ಕಬ್ಬಿನ ಬೆಳೆಗಾರರಿಗೆ ಸಂಬಂಧಪಟ್ಟಂತೆ ನಿನ್ನೆ ಸಭೆ ಮಾಡಿದ್ದರು. ಸರಕಾರದಲ್ಲಿ ಹಣ ಎಲ್ಲಿದೆ, ನನ್ನ ಜೇಬಿನಿಂದ ಹೇಗೆ ಕೊಡಲು ಸಾಧ್ಯ ಎಂದು ಅಸಹಾಯಕತೆಯನ್ನು ವ್ಯಕ್ತ ಮಾಡಿದ್ದರು ಎಂದು ಗಮನ ಸೆಳೆದರು. ಮಳೆ ಕಡಿಮೆ ಆಗುತ್ತದೆ ಎಂಬ ಸೂಚನೆ ಸಿಕ್ಕಿದಾಗ, ರೈತರಿಗೆ ವಿಶ್ವಾಸವನ್ನು ತುಂಬಬೇಕಾದಂತಹ ಮುಖ್ಯಮಂತ್ರಿಗಳು ಯಾವುದೇ ಬೆಳೆಗಳನ್ನು ಬೆಳೆಯಬೇಡಿ ಅಂತ ಹೇಳಿದ್ದರು. ಇವತ್ತು ಕಬ್ಬು ಬೆಳೆಗಾರರ ವಿಷಯ ಬಂದಾಗ, ಮತ್ತೆ ವಿಶ್ವಾಸವನ್ನು ತುಂಬಬೇಕಾದಂತಹ ಸರಕಾರವು, ಹಣ ಇಲ್ಲ ಎಂಬುದಾಗಿ ಸ್ಪಷ್ಟ ಮಾಡಿದ್ದಾರೆ ಎಂದು ವಿವರಿಸಿದರು. ಒಟ್ಟಾರೆ ಈ ಸರ್ಕಾರ ಒಂದು ಜೀರೋ ಬ್ಯಾಲೆನ್ಸ್ ಸರಕಾರ; ಇದು ದಿವಾಳಿ ಸರಕಾರ. ಯಾವ ವರ್ಗಕ್ಕೂ ಕೂಡ ನ್ಯಾಯವನ್ನು ಕೊಡದೇ ಇರುವ ಅಸಹಾಯಕತೆಗೆ ಈ ಸರಕಾರ ಇವತ್ತು ಮುಟ್ಟಿದೆ ಎಂದು ಟೀಕಿಸಿದರು. ವಿಧಾನಸೌಧದ ಮೂರನೇ ಮಹಡಿಯಲ್ಲಿ ಆಡಳಿತ ಇದೆ ಅಂತ ಅನ್ನಿಸುತ್ತಿಲ್ಲ. ಯಾವ ಸಚಿವರೂ ಆಡಳಿತದ ಪ್ರಕ್ರಿಯೆ ಬಗ್ಗೆ ಗಮನವನ್ನು ಕೊಡುತ್ತಿಲ್ಲ ಎಂದು ಆಕ್ಷೇಪಿಸಿದರು. ಮುಖ್ಯಮಂತ್ರಿಯಿಂದ ಹಿಡಿದು ಕಾಂಗ್ರೆಸ್ಸಿನ ಶಾಸಕರು, ಕಾರ್ಯಕರ್ತರ ತನಕ ಸ್ಟಿಂಗ್ ಆಪರೇಷನ್‌ನಲ್ಲೇ ತೊಡಗಿದ್ದಾರೆ ಎಂದು ಆರೋಪಿಸಿದರು. ಬರಗಾಲ ತೀವ್ರವಾಗಿದೆ. ಬರಗಾಲದ ಸಭೆಗಳನ್ನು ನಡೆಸಿಲ್ಲ. ಕೇವಲ ಐಎಎಸ್ ಅಧಿಕಾರಿಗಳಷ್ಟೇ ಅಧಿಕಾರ ನಡೆಸುತ್ತಿದ್ದಾರೆ. ಶಾಸಕಾಂಗವು ಆಡಳಿತ ನಡೆಸುತ್ತಿಲ್ಲ ಎಂದು ದೂರಿದರು.

ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿಲ್ಲ. ಸರಕಾರದಲ್ಲಿ ಬಜೆಟ್‌ನಲ್ಲಿ ಘೋಷಣೆಯಾದಂತಹ ಯಾವ ಯೋಜನೆಗಳ ಸರಕಾರಿ ಆದೇಶ ಹೊರಡಿಸಿಲ್ಲ. ಇಂತಹ ಒಂದು ಅಸಹಾಯಕತೆಯ ಶೂನ್ಯ ಆವರಿಸಿರುವಂತಹ ಪರಿಸ್ಥಿತಿ ಕರ್ನಾಟಕದಲ್ಲಿ ಯಾವತ್ತೂ ಕೂಡ ಬಂದಿರಲಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

# ರಂಗನಾಥ್ ಗೆಲುವು: ಎನ್‌ಡಿಎ ಕಾರ್ಯಕರ್ತರಿಗೆ ಅಭಿನಂದನೆ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಎ.ಪಿ. ರಂಗನಾಥ್ ಅವರು ಭರ್ಜರಿ ಗೆಲುವು ಸಾಧಿಸಿರುವುದಕ್ಕೆ ಅಭಿನಂದನೆ ಸಲ್ಲಿಸಿರುವ ಮೈತ್ರಿಕೂಟದ ನಾಯಕರು, ಗೆಲುವಿಗೆ ಶ್ರಮಿಸಿದ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರಿಗೆ ಧನ್ಯವಾದ ತಿಳಿಸಿದ್ದಾರೆ.

ಎರಡೂ ಪಕ್ಷಗಳ ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಹಗಲಿರುಳು ಶ್ರಮಿಸಿದ್ದರಿಂದ ಈ ಗೆಲುವು ಸಾಧ್ಯವಾಗಿದೆ. ಮೈತ್ರಿಕೂಟದ ಮೇಲೆ ವಿಶ್ವಾಸವಿಟ್ಟು ಮತ ಚಲಾಯಿಸಿದ ಶಿಕ್ಷಕರ ಸಮುದಾಯಕ್ಕೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಲಾಗಿದೆ.

ಈ ಗೆಲುವು ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರ ಅಸಮಾಧಾನಕ್ಕೆ ಸಾಕ್ಷಿಯಾಗಿದ್ದು, ಕಾಂಗ್ರೆಸ್ ಸರ್ಕಾರದ ಪತನಕ್ಕೆ ಮುನ್ನುಡಿಯಾಗಿದೆ ಎಂದು ಮೈತ್ರಿಕೂಟದ ನಾಯಕರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಗೆಲುವಿಗಾಗಿ ಶ್ರಮಿಸಿದ ಪ್ರತಿಯೊಬ್ಬ ಕಾರ್ಯಕರ್ತರ ಕೊಡುಗೆಯನ್ನು ಶ್ಲಾಘಿಸಿದ್ದಾರೆ.

# ರಾಜಮನೆತನದ ಗೌರವ, ಸಂಪ್ರದಾಯಕ್ಕೆ ಚ್ಯುತಿ ಇಲ್ಲ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ಮೈಸೂರು ರಾಜಮನೆತನಕ್ಕೆ ನೀಡಬೇಕಾದ ಗೌರವ ಹಾಗೂ ಸಾಂಪ್ರದಾಯಿಕ ಪದ್ಧತಿಗಳಿಗೆ ಚ್ಯುತಿ ತರುವ ಉದ್ದೇಶ ಸರ್ಕಾರಕ್ಕಿಲ್ಲ. ದಸರಾ ಮಹೋತ್ಸವ ಇಡೀ ರಾಜ್ಯದ ಹೆಮ್ಮೆಯ ಹಬ್ಬವಾಗಿದ್ದು, ನಮ್ಮ ಕಡೆಯಿಂದ ಏನಾದರೂ ತಪ್ಪಾಗಿದ್ದರೆ ಅದನ್ನು ತಿದ್ದಿಕೊಳ್ಳಲು ಸಿದ್ಧರಿದ್ದೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.



ಮೈಸೂರು ದಸರಾ ಆಚರಣೆ ಕುರಿತು ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ದಸರಾ ಮಹೋತ್ಸವ ಸರ್ಕಾರದ ಕಾರ್ಯಕ್ರಮವೇ ಹೊರತು, ಡಿ.ಕೆ. ಶಿವಕುಮಾರ್ ಅವರ ವೈಯಕ್ತಿಕ ಕಾರ್ಯಕ್ರಮವಲ್ಲ. ಪ್ರಮೋದಾದೇವಿ ಅವರ ಹೇಳಿಕೆಯನ್ನು ಸಂಪೂರ್ಣವಾಗಿ ಗಮನಿಸಿ, ಅವರೊಂದಿಗೆ ಚರ್ಚೆ ನಡೆಸುತ್ತೇನೆ. ಇದು ವ್ಯಕ್ತಿಗತ ವಿಚಾರವಲ್ಲ, ರಾಜ್ಯದ ಹೆಮ್ಮೆಯ ಹಬ್ಬದ ವಿಷಯ ಎಂದು ತಿಳಿಸಿದರು.

ಮೊದಲಿನಿಂದಲೂ ರಾಜಮನೆತನಕ್ಕೆ ನೀಡಬೇಕಾದ ಗೌರವವನ್ನು ಪರಂಪರೆಯ ಪ್ರಕಾರ ನೀಡುತ್ತಾ ಬರಲಾಗಿದೆ. ಹಳೆಯ ಸಂಪ್ರದಾಯಗಳನ್ನು ಮುಂದುವರಿಸಿದ್ದೇವೆ. ಇತಿಹಾಸದ ಎಲ್ಲ ಸೂಕ್ಷ್ಮ ವಿಚಾರಗಳು ತಿಳಿದಿರದಿದ್ದರೂ, ಪರಂಪರೆಗೆ ಗೌರವ ನೀಡಿದ್ದೇವೆ. ಪ್ರಸ್ತುತ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಿಯಮಗಳ ಪ್ರಕಾರವೇ ಕಾರ್ಯನಿರ್ವಹಿಸಬೇಕಾಗುತ್ತದೆ ಎಂದು ಹೇಳಿದರು.

ದಸರಾ ಮೆರವಣಿಗೆಯಲ್ಲಿ ಆನೆ ತಮ್ಮ ಮಾತು ಕೇಳಲಿಲ್ಲ ಎಂಬ ಪ್ರಶ್ನೆಯೇ ಇಲ್ಲ. ಈ ಬಾರಿ ಹೊಸ ಆನೆ 'ಪ್ರಶಾಂತ' ಮೂಲಕ ಸಾಂಪ್ರದಾಯಿಕವಾಗಿ ಮೆರವಣಿಗೆ ನಡೆಸಲಾಗಿದೆ. ಶಿವಮೊಗ್ಗದಲ್ಲಿ ಈ ಹಿಂದೆ ನಡೆದ ಘಟನೆಗಳನ್ನು ಗಮನದಲ್ಲಿಟ್ಟುಕೊಂಡು ಮುನ್ನೆಚ್ಚರಿಕೆ ವಹಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

# ದೇಶ ತೊರೆಯುವಂತೆ ನೀಡಿದ್ದ ನೋಟಿಸ್‌ಗೆ ತಡೆ

● ವಿಕ್ರಮ ವಾಹಿನಿ । ಮುಂಬೈ

ದೇಶ ತೊರೆಯುವಂತೆ ಸೂಚಿಸಿ ನೀಡಲಾಗಿದ್ದ ನೋಟಿಸ್‌ಗೆ ಸಂಬಂಧಿಸಿದಂತೆ ನಟ ಇಮ್ರಾನ್ ಖಾನ್ ಅವರಿಗೆ ಬಾಂಬೆ ಹೈಕೋರ್ಟ್ ಮಧ್ಯಂತರ ರಿಲೀಫ್ ನೀಡಿದೆ. ಮುಂದಿನ ವಿಚಾರಣೆ ನಡೆಯುವವರೆಗೆ ನೋಟಿಸ್ ಆಧರಿಸಿ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ನ್ಯಾಯಾಲಯ ಸೂಚಿಸಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆಗೆದುಹಾಕುವಂತೆ ಆಗ್ರಹಿಸಿ, ಚುನಾವಣಾ ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ ಮುಂಬೈನ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದಕ್ಕೆ ಸಂಬಂಧಿಸಿದಂತೆ ಇಮ್ರಾನ್ ಖಾನ್ ಅವರಿಗೆ ದೇಶ ತೊರೆಯುವಂತೆ ನೋಟಿಸ್ ನೀಡಲಾಗಿತ್ತು. ಈ ನೋಟಿಸ್ ಪ್ರಶ್ನಿಸಿ ಅವರು ಬಾಂಬೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಇಮ್ರಾನ್ ಖಾನ್ ಅವರ ಅರ್ಜಿಯ ವಿಚಾರಣೆ ಸೋಮವಾರ ನಡೆಯಬೇಕಿತ್ತು. ಆದರೆ, ಕೇಂದ್ರ ಸರ್ಕಾರದ ಪರ ವಾದ ಮಂಡಿಸುತ್ತಿರುವ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಆನ್‌ಲೈನ್ ಮೂಲಕವೂ ವಿಚಾರಣೆಗೆ ಹಾಜರಾಗಲು ಸಾಧ್ಯವಾಗಲಿಲ್ಲ. ಹೀಗಾಗಿ, ವಿಚಾರಣೆಯನ್ನು ಮುಂದಿನ ಸೋಮವಾರ, ನವೆಂಬರ್ 2ಕ್ಕೆ ಮುಂದೂಡುವಂತೆ ಕೇಂದ್ರ ಸರ್ಕಾರ ನ್ಯಾಯಾಲಯವನ್ನು ಕೋರಿತು.

ವಿಚಾರಣೆ ವೇಳೆ ನಟನ ಪರ ವಕೀಲರು, ಇಮ್ರಾನ್ ಖಾನ್ ಅವರು ಮರುದಿನದೊಳಗೆ ದೇಶ ತೊರೆಯುವಂತೆ ಸೂಚಿಸಲಾಗಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು.

ನಟನ ಪರವಾಗಿ ಹಿರಿಯ ವಕೀಲ ವೆಂಕಟೇಶ್ ಧೋಂಡ್ ವಾದ ಮಂಡಿಸಿ, ಕೇವಲ 14 ದಿನಗಳೊಳಗೆ ದೇಶ ತೊರೆಯುವಂತೆ ವ್ಯಕ್ತಿಯೊಬ್ಬರಿಗೆ ಆದೇಶಿಸುವುದು ಸಂಪೂರ್ಣ ತಪ್ಪು ಎಂದು ನ್ಯಾಯಾಲಯದಲ್ಲಿ ಆಕ್ಷೇಪ ವ್ಯಕ್ತಪಡಿಸಿದರು. ಮುಂದಿನ ವಿಚಾರಣೆಯವರೆಗೆ ನೋಟಿಸ್ ಆಧರಿಸಿ ಕ್ರಮ ಕೈಗೊಳ್ಳದಂತೆ ನೀಡಿರುವ ಮಧ್ಯಂತರ ರಕ್ಷಣೆಯಿಂದ ಇಮ್ರಾನ್ ಖಾನ್ ಅವರಿಗೆ ತಾತ್ಕಾಲಿಕ ಪರಿಹಾರ ದೊರೆತಿದೆ. ಪ್ರಕರಣದ ಮುಂದಿನ ವಿಚಾರಣೆ ನವೆಂಬರ್ 2ರಂದು ನಡೆಯಲಿದೆ.

# ನ.1 ರ ಪ್ರತಿಭಟನೆಗೆ ದೇಶವ್ಯಾಪಿ ಬೆಂಬಲ: ಮಾಜಿ ಸಭಾಪತಿ ವಿ.ಆರ್. ಸುದರ್ಶನ

**ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ನವೆಂಬರ್ 1ರಂದು ನಡೆಯಲಿರುವ ಪ್ರತಿಭಟನೆಗೆ ದೇಶವ್ಯಾಪಿ ಬೆಂಬಲ ವ್ಯಕ್ತವಾಗಿದೆ ಎಂದು ಮಾಜಿ ಸಭಾಪತಿ ವಿ.ಆರ್. ಸುದರ್ಶನ್ ತಿಳಿಸಿದ್ದಾರೆ. ಮತದಾರರ ಹಕ್ಕುಗಳ ರಕ್ಷಣೆ ಮತ್ತು ಚುನಾವಣಾ ಆಯೋಗದ ಸ್ವಾಯತ್ತತೆಗಾಗಿ ಇಂಡಿಯಾ ಮೈತ್ರಿಕೂಟದ ಆಶ್ರಯದಲ್ಲಿ ಹೋರಾಟ ನಡೆಯಲಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜಿನಾಮೆಗೆ ಆಗ್ರಹಿಸಿ ನವೆಂಬರ್ 1ರ ಪ್ರತಿಭಟನೆಗೆ ದೇಶವ್ಯಾಪಿ ಬೆಂಬಲ ವ್ಯಕ್ತವಾಗಿದೆ. ಅಂದು ನಡೆಯಲಿರುವ ಹೋರಾಟದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು, ಪ್ರಜಾಪ್ರಭುತ್ವದಲ್ಲಿ ನಂಬಿಕೆ ಹೊಂದಿರುವ ಸಮಾನ ಮನಸ್ಕ ನಾಗರಿಕ ಸಂಘಟನೆಗಳ ಪ್ರತಿನಿಧಿಗಳೂ ಈ ಹೋರಾಟದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಜಿ ಸಭಾಪತಿ ವಿಆರ್ ಸುದರ್ಶನ್ ಅವರು ತಿಳಿಸಿದ್ದಾರೆ.



ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಸಮಾನ ಮನಸ್ಕ ರಾಜಕೀಯ ಪಕ್ಷಗಳು ಇಂಡಿಯಾ ಮೈತ್ರಿಕೂಟದ ಆಶ್ರಯದಲ್ಲಿ ಈ ಹೋರಾಟದಲ್ಲಿ ಭಾಗವಹಿಸಲಿವೆ. ಈ ಕಾರ್ಯಕ್ರಮ ಯಶಸ್ವಿಯಾಗಲು ಎಲ್ಲರೂ ಸಹಕರಿಸಬೇಕು. ಮತದಾರರ ಹಕ್ಕುಗಳ ರಕ್ಷಣೆ, ಚುನಾವಣಾ ಆಯೋಗದ ಸ್ವಾಯತ್ತತೆ ಮತ್ತು ಪ್ರಜಾಪ್ರಭುತ್ವದ ಉಳಿವಿಗಾಗಿ ಈ ಹೋರಾಟ ಅತ್ಯಂತ ಮಹತ್ವದ್ದಾಗಿದೆ.

ದೇಶದಲ್ಲಿ ಮೊದಲ ಮತದಾರರ ಪಟ್ಟಿಯನ್ನು 15 ನವೆಂಬರ್ 1951ರಂದು ಪ್ರಕಟಿಸಲಾಯಿತು. ಈ ಕುರಿತು ಪತ್ರಿಕೆಗಳಲ್ಲಿಯೂ ಜಾಹೀರಾತುಗಳ ಮೂಲಕ ಮಾಹಿತಿ ನೀಡಲಾಗಿದೆ. 1952ರಲ್ಲಿ ದೇಶದ ಮೊದಲ ಸಾರ್ವತ್ರಿಕ ಚುನಾವಣೆ ನಡೆದಿದ್ದು, ಮತದಾರರ ಪಟ್ಟಿ ಮತ್ತು ಚುನಾವಣಾ ವ್ಯವಸ್ಥೆ ನಮ್ಮ ಸಂವಿಧಾನದ ಮಹತ್ವದ ಜವಾಬ್ದಾರಿಗಳಾಗಿವೆ. 1949ರ ನವೆಂಬರ್ 26ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾದ ಸಂವಿಧಾನವನ್ನು ದೇಶದ ಜನರು ನಮಗೇ ನಾವೇ ಅರ್ಪಿಸಿಕೊಂಡಿದ್ದೇವೆ ಎಂದರು.

ಬಲರಾಮ್ ಕೃಷ್ಣನ್ ಅವರು ಮಾತನಾಡಿ, ರಾಜ್ಯದಲ್ಲಿ ಪಾರದರ್ಶಕತೆ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಲಾಜಿಕಲ್ ಡಿಸ್ಕ್ರೆಪೆನ್ಸಿ ವಿಭಾಗದಲ್ಲಿ ಸೇರಿರುವ ಮತದಾರರು ಯಾರು ಎಂಬ ವಿವರಗಳನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಬೇಕು.

ನೋ ಮ್ಯಾಪಿಂಗ್ ವಿಭಾಗದಲ್ಲಿ ಸೇರಿರುವ ಮತದಾರರ ಅಂಕಿಅಂಶಗಳನ್ನೂ ಸಾರ್ವಜನಿಕವಾಗಿ ಪ್ರಕಟಿಸಬೇಕು. ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಮಾತನಾಡಿ, ಆರ್. ಅಶೋಕ್, ಚಲವಾದಿ ನಾರಾಯಣಸ್ವಾಮಿ, ಅಶ್ವತ್ಥನಾರಾಯಣ ಮತ್ತು ವಿಜಯೇಂದ್ರ ಸೇರಿದಂತೆ ಬಿಜೆಪಿ ನಾಯಕರು ಖರ್ಗೆ ಅವರ ವಿರುದ್ಧ ಮಾತನಾಡುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷವು ಇಂತಹ ನಾಯಕರಿಂದ ಕಲಿಯಬೇಕಾದದ್ದು ಏನೂ ಇಲ್ಲ. ಕರ್ನಾಟಕದಲ್ಲಿ ನಿಯಮಗಳನ್ನು ಉಲ್ಲಂಘಿಸಿ ಮಾತನಾಡುವ ನಾಯಕರು ಯಾರಾದರೂ ಇದ್ದರೆ, ಅದು ಆರ್. ಅಶೋಕ್. ಸದನದಲ್ಲಿ ಹೇಗೆ ವರ್ತಿಸಬೇಕು ಎಂಬುದರ ಬಗ್ಗೆ ಮಾತನಾಡುವ ಮೊದಲು ಬಿಜೆಪಿ ನಾಯಕರು ತಮ್ಮ ನಡವಳಿಕೆಯನ್ನು ಪರಿಶೀಲಿಸಿಕೊಳ್ಳಬೇಕು ಎಂದರು. ಒಂದು ಪದವನ್ನು ಮುಂದಿಟ್ಟುಕೊಂಡು ಪ್ರಬುದ್ಧ ನಾಯಕರನ್ನು ಗುರಿಯಾಗಿಸಿ ಅವಮಾನಿಸುವ ಕೆಲಸವನ್ನು ಬಿಜೆಪಿ ನಾಯಕರು ಮಾಡಬಾರದು ಎಂದು ಆಗ್ರಹಿಸಿದರು.

# ಮಲ್ಲಿಕಾರ್ಜುನ್ ಖರ್ಗೆ ವಿರುದ್ಧ ಬಿಜೆಪಿಗರಿಂದ ವೈಯುಕ್ತಿಕ ದಾಳಿ: ರಮೇಶ್ ಬಾಬು ಆಕ್ರೋಶ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ದೇಶದ ಅತ್ಯಂತ ಅನುಭವಿ ಸಂಸದೀಯ ನಾಯಕರಲ್ಲಿ ಒಬ್ಬರಾಗಿದ್ದು, ದಶಕಗಳ ಕಾಲದ ಶಾಸಕಾಂಗ ಅನುಭವ ಮತ್ತು ಪ್ರಜಾಸತ್ತಾತ್ಮಕ ಚಟುವಟಿಕೆಗಳ ಮೂಲಕ ಸಾರ್ವಜನಿಕ ಜೀವನಕ್ಕೆ ಮಹತ್ವದ ಕೊಡುಗೆಗಳನ್ನು ನೀಡಿದ್ದಾರೆ. ಅಂಥಹ ನಾಯಕರನ್ನು ವಿರುದ್ಧ ಬಿಜೆಪಿಗರು ಪದೇ ಪದೇ ಅವಹೇಳನ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು ಬಿಜೆಪಿ ನಾಯಕರು ಮಲ್ಲಿಕಾರ್ಜುನ ಖರ್ಗೆಯವರ ವಿರುದ್ಧ ಪದೇ ಪದೇ ಹೆಚ್ಚು ತಿರುಗುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಸಂಸದ ವೀರೇಂದ್ರ ಸಿಂಗ್ ಅವರು ಖರ್ಗೆ ಮತ್ತು ಇತರ ಕಾಂಗ್ರೆಸ್ ನಾಯಕರ ವಿರುದ್ಧ 2015 ರ ಡಿ.11ರಂದು ಮಾನಹಾನಿಕರ ಹೇಳಿಕೆಗಳನ್ನು ನೀಡುವ ಮೂಲಕ ದಾಳಿ ನಡೆಸಿದ್ದಾರೆ ಎಂದು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ರಾಜ್ಯಾಧ್ಯಕ್ಷರಾದ ರಮೇಶ್ ಬಾಬು ತಿಳಿಸಿದ್ದಾರೆ.

ಬಿಜೆಪಿ ನಾಯಕರಿಂದ ಅವರ ವಿರುದ್ಧ ಪದೇಪದೇ ವೈಯಕ್ತಿಕ ಟೀಕೆಗಳು, ಅವಹೇಳನಕಾರಿ ಹೇಳಿಕೆಗಳು ಹಾಗೂ ಸಾರ್ವಜನಿಕವಾಗಿ ಅವರ ಪ್ರತಿಷ್ಠೆಗೆ ಧಕ್ಕೆ ತರುವ ಅಭಿಯಾನಗಳು ನಡೆಯುತ್ತಿರುವುದು ನಮ್ಮ ದೇಶದಲ್ಲಿ ರಾಜಕೀಯ ಸಂವಾದದ ಗುಣಮಟ್ಟ ಕುಸಿಯುತ್ತಿರುವ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡಿದೆ. ಅವರ ಸಾರ್ವಜನಿಕ ಭಾಷಣಗಳ ಕುರಿತ ವಿವಾದಗಳಿಂದ ಹಿಡಿದು ವೈಯಕ್ತಿಕ ಟೀಕೆಗಳು ಮತ್ತು ಅವರ ರಾಜೀನಾಮೆಗೆ ಒತ್ತಾಯಿಸಿ ಸಂಘಟಿತ ಪ್ರತಿಭಟನೆಗಳನ್ನು ನಡೆಸುವವರೆಗೆ, ರಾಜಕೀಯ ಸಂಘರ್ಷದ ಈ ಮಾದರಿಯು ರಚನಾತ್ಮಕ ಚರ್ಚೆಯಿಂದ ವೈಯಕ್ತಿಕ ದಾಳಿಗಳತ್ತ ಹೆಚ್ಚು ಹೆಚ್ಚು ತಿರುಗುತ್ತಿದ್ದಾರೆ.

ಅರ್ ಎಸ್ ಎಸ್ ವಿಷಯಕ್ಕೆ ಸಂಬಂಧಿಸಿದಂತೆ 2016ರಲ್ಲಿ ಫೆ.ನಲ್ಲಿ ಬಿಜೆಪಿ ಸಚಿವರು, ಅದರಲ್ಲೂ ವಿಶೇಷವಾಗಿ ಎಂ. ವೆಂಕಯ್ಯ ನಾಯ್ಡು ಸೇರಿದಂತೆ ಹಲವರು ಲೋಕಸಭೆಯಲ್ಲಿ ಖರ್ಗೆ ಅವರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

## ಖರ್ಗೆ ವಿರುದ್ಧ ವೈಯಕ್ತಿಕ ದಾಳಿ ಖಂಡನೀಯ



"ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಬಿಜೆಪಿ ನಾಯಕರು ಪದೇಪದೇ ವೈಯಕ್ತಿಕ ಟೀಕೆ ಹಾಗೂ ಅವಹೇಳನಕಾರಿ ಹೇಳಿಕೆಗಳನ್ನು ನೀಡುತ್ತಿರುವುದು ಖಂಡನೀಯ. ದಶಕಗಳ ಸಂಸದೀಯ ಅನುಭವ ಹೊಂದಿರುವ ಖರ್ಗೆ ಅವರನ್ನು ಸೈದ್ಧಾಂತಿಕವಾಗಿ ಎದುರಿಸಲಾಗದೆ ವೈಯಕ್ತಿಕ ದಾಳಿಗಳಿಗೆ ಮುಂದಾಗಿರುವುದು ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ವಿರುದ್ಧವಾಗಿದೆ. ರಾಜಕೀಯ ಭಿನ್ನಾಭಿಪ್ರಾಯಗಳನ್ನು ನೀತಿ, ಸತ್ಯಾಂಶ ಮತ್ತು ಸಾರ್ವಜನಿಕ ಹೊಣೆಗಾರಿಕೆಯ ಆಧಾರದಲ್ಲಿ ವ್ಯಕ್ತಪಡಿಸಬೇಕು. ರಾಜಕೀಯ ಎದುರಾಳಿಗಳಿಗೆ ಗೌರವ ನೀಡುವುದು ದೌರ್ಬಲ್ಯವಲ್ಲ, ಪ್ರಜಾಸತ್ತಾತ್ಮಕ ಪ್ರಬುದ್ಧತೆಯ ಸಂಕೇತ. ಬಿಜೆಪಿ ನಾಯಕತ್ವವು ವೈಯಕ್ತಿಕ ನಿಂದನೆಗಳನ್ನು ಬದಿಗಿಟ್ಟು ಗೌರವಯುತ ರಾಜಕೀಯ ಸಂವಾದಕ್ಕೆ ಆದ್ಯತೆ ನೀಡಬೇಕು" ಎಂದು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ರಾಜ್ಯಾಧ್ಯಕ್ಷ ರಮೇಶ್ ಬಾಬು ಆಗ್ರಹಿಸಿದ್ದಾರೆ.

2017ರಲ್ಲಿ ಡಿ.6 ರಂದು ಕಾಂಗ್ರೆಸ್ ನಾಯಕರು ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ್ದಾರೆ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ಸಚಿವರು ಲೋಕಸಭೆಯಲ್ಲಿ ಖರ್ಗೆ ಅವರ ಮೇಲೆ ದಾಳಿ ನಡೆಸಿದ್ದಾರೆ. 2019ರ ಲೋಕಸಭಾ ಚುನಾವಣೆಯಲ್ಲಿ ಸಂಸತ್ತಿನಲ್ಲಿ ಖರ್ಗೆ ಅವರನ್ನು ಎದುರಿಸಲು ಬಿಜೆಪಿ ವಿಫಲವಾದ ಹಿನ್ನೆಲೆಯಲ್ಲಿ, ಅವರನ್ನು ಚುನಾವಣೆಯಲ್ಲಿ ಸೋಲಿಸಲು ಬಿಜೆಪಿ ನಾಯಕರು ಸಂಚು ರೂಪಿಸಿದ್ದಾರೆ. 2022ರ ಡಿ.20 ರಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಮತ್ತು ಇತರರು ರಾಜ್ಯಸಭೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ.

2023 ರ ಏ.27 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಕುರಿತು ಖರ್ಗೆ ಅವರು ನೀಡಿದ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ನಾಯಕರು ಅವರ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ. ಆಗಸ್ಟ್ 2ರಂದು ಕರ್ನಾಟಕದ ಮಾಜಿ ಗೃಹ ಸಚಿವರು ಹಾಗೂ ಬಿಜೆಪಿ ನಾಯಕರಾದ ಅರಗ ಜ್ಞಾನೇಂದ್ರ ಅವರು ಖರ್ಗೆ ಅವರ ಮೈಬಣ್ಣದ ಕುರಿತು ಟೀಕೆಗಳನ್ನು ಮಾಡಿದ್ದಾರೆ.

2023ರ ಆಗಸ್ಟ್ ನಲ್ಲಿ ಕರ್ನಾಟಕದ ಬಿಜೆಪಿ ನಾಯಕ ಅರಾಗ ಜ್ಞಾನೇಂದ್ರ ಅವರು ಖರ್ಗೆ ಅವರ ಮೈಬಣ್ಣದ ಕುರಿತು ಮಾಡಿದ ಟೀಕೆಗಳು ಸೇರಿದಂತೆ, ಅವರ ವಿರುದ್ಧದ ಇತರ ವೈಯಕ್ತಿಕ ಟೀಕೆಗಳು ರಾಜಕೀಯ ಸಂವಾದವು ಗೌರವ, ಪರಸ್ಪರ ಆದರ ಮತ್ತು ಸಾಂವಿಧಾನಿಕ ಮೌಲ್ಯಗಳಿಂದ ಮಾರ್ಗದರ್ಶಿಸಲ್ಪಡಬೇಕೆಂಬುದನ್ನು ಸ್ಪಷ್ಟಪಡಿಸುತ್ತವೆ.

ಸೈದ್ಧಾಂತಿಕ ವಿಷಯಗಳಲ್ಲಿ ಖರ್ಗೆ ಅವರನ್ನು ಎದುರಿಸಲು ಬಿಜೆಪಿ ವಿಫಲವಾಗಿದೆ. 2014ರಿಂದ ಬಿಜೆಪಿ ನಾಯಕರು ಒಂದಲ್ಲ ಒಂದು ಕಾರಣಕ್ಕೆ ಅವರ ಮೇಲೆ ಪದೇಪದೇ ದಾಳಿ ನಡೆಸುತ್ತಾ, ಸಾರ್ವಜನಿಕ ಜೀವನದಲ್ಲಿ ಅವರ ಪ್ರತಿಷ್ಠೆಗೆ ಧಕ್ಕೆ ತರಲು ಪ್ರಯತ್ನಿಸುತ್ತಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳು ಅನಿವಾರ್ಯ. ಆದರೆ ವೈಯಕ್ತಿಕ ದ್ವೇಷವು ರಾಜಕೀಯ ಚರ್ಚೆಗೆ ಪರ್ಯಾಯವಾಗಲು ಎಂದಿಗೂ ಅವಕಾಶ ನೀಡಬಾರದು. ಮಲ್ಲಿಕಾರ್ಜುನ ಖರ್ಗೆ ಅವರ ಘನತೆಯನ್ನು, ಪ್ರತಿಯೊಬ್ಬ ಸಾರ್ವಜನಿಕ ಪ್ರತಿನಿಧಿಯ ಘನತೆಯಂತೆಯೇ, ಪರಸ್ಪರ ಗೌರವ, ಸಾಂವಿಧಾನಿಕ ನೈತಿಕತೆ ಮತ್ತು ಪ್ರಜಾಸತ್ತಾತ್ಮಕ ಹೊಣೆಗಾರಿಕೆಯನ್ನು ಆಧರಿಸಿದ ರಾಜಕೀಯ ಸಂಸ್ಕೃತಿಯ ಮೂಲಕ ರಕ್ಷಿಸಬೇಕು ಎಂದು ರಮೇಶ್ ಬಾಬು ಅವರು ಹೇಳಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷರ ಹುದ್ದೆಯು ರಾಜಕೀಯ ಮತ್ತು ಸಾಂಸ್ಥಿಕ ದೃಷ್ಟಿಯಿಂದ ಅಪಾರ ಮಹತ್ವವನ್ನು ಹೊಂದಿದೆ. ಖರ್ಗೆ ಅವರ ಹಿರಿಯತನ ಮತ್ತು ದೀರ್ಘಕಾಲದ ಸಂಸದೀಯ ಅನುಭವಕ್ಕೆ, ಯಾವುದೇ ರಾಜಕೀಯ ಪಕ್ಷದ ನಾಯಕರಾಗಿದ್ದರೂ ಪ್ರತಿಯೊಬ್ಬರಿಗೂ ನೀಡಬೇಕಾದ ಮೂಲಭೂತ ಗೌರವ ಮತ್ತು ಸೌಜನ್ಯವನ್ನು ನೀಡಬೇಕು. ರಾಜಕೀಯ ಎದುರಾಳಿಗೆ ಗೌರವ ನೀಡುವುದು ರಾಜಕೀಯ ದೌರ್ಬಲ್ಯದ ಸಂಕೇತವಲ್ಲ; ಅದು ಪ್ರಜಾಸತ್ತಾತ್ಮಕ ಪ್ರಬುದ್ಧತೆಯ ಪ್ರತಿಬಿಂಬವಾಗಿದೆ.

2026ರ ಅಕ್ಟೋಬರ್ 25ರಂದು ಪಾಟ್ನಾದಲ್ಲಿ ಖರ್ಗೆ ಅವರು ನೀಡಿದ ಹೇಳಿಕೆಗಳ ಸುತ್ತ ಇತ್ತೀಚೆಗೆ ಉಂಟಾದ ವಿವಾದವು ರಾಜಕೀಯ ಸಂಘರ್ಷದ ತೀವ್ರತೆಯನ್ನು ಮತ್ತೊಮ್ಮೆ ಬಹಿರಂಗಪಡಿಸಿದೆ. ಅವರ ಹೇಳಿಕೆಗಳನ್ನು ಟೀಕಿಸುವ ಮತ್ತು ವಿವರಣೆ ಕೇಳುವ ಹಕ್ಕು ಬಿಜೆಪಿಗೆ ಇದೆ.

ಅದೇ ರೀತಿ, ಬಿಜೆಪಿ ನಾಯಕರ ಹೇಳಿಕೆಗಳು ಮತ್ತು ನಡವಳಿಕೆಯನ್ನು ಪ್ರಶ್ನಿಸುವ ಹಕ್ಕು ಕಾಂಗ್ರೆಸ್ ನಾಯಕರಿಗೂ ಇದೆ. ಆದರೆ ಪ್ರಜಾಸತ್ತಾತ್ಮಕ ಹೊಣೆಗಾರಿಕೆಯನ್ನು ಎಲ್ಲರಿಗೂ ಸಮಾನವಾಗಿ, ಯಾವುದೇ ಪಕ್ಷಪಾತವಿಲ್ಲದೆ ಅನ್ವಯಿಸಬೇಕು. ರಾಜಕೀಯ ಪಕ್ಷಗಳು ವೈಯಕ್ತಿಕ ನಿಂದನೆ ಅಥವಾ ವೈಯಕ್ತಿಕ ನಾಯಕರ ವಿರುದ್ಧ ದ್ವೇಷವನ್ನು ಪ್ರಚೋದಿಸುವ ಬದಲು, ಸತ್ಯಾಂಶಗಳು, ನೀತಿಗಳು, ಸಂಸದೀಯ ಚರ್ಚೆಗಳು ಮತ್ತು ಸಾರ್ವಜನಿಕ ಹೊಣೆಗಾರಿಕೆಯ ಮೂಲಕ ಪರಸ್ಪರ ಸವಾಲು ಹಾಕಿದಾಗ ಭಾರತದ ಪ್ರಜಾಪ್ರಭುತ್ವ ಬಲಗೊಳ್ಳುತ್ತದೆ.

ಆದ್ದರಿಂದ, ಬಿಜೆಪಿ ನಾಯಕತ್ವವು ತಾನು ಪ್ರತಿಪಾದಿಸುವ ಪ್ರಜಾಸತ್ತಾತ್ಮಕ ಸಂಪ್ರದಾಯಗಳನ್ನು ಎತ್ತಿಹಿಡಿಯಬೇಕು, ಟೀಕೆಗಳು ವಿಷಯಾಧಾರಿತವಾಗಿರುವುದನ್ನು ಖಚಿತಪಡಿಸಬೇಕು ಮತ್ತು ಸಾರ್ವಜನಿಕ ಜೀವನದ ಘನತೆಯನ್ನು ಕುಗ್ಗಿಸುವ ವೈಯಕ್ತಿಕ ದಾಳಿಗಳನ್ನು ಪ್ರೋತ್ಸಾಹಿಸುವುದನ್ನು ತಡೆಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಶಾಲೆಗಳಲ್ಲಿ ಕನ್ನಡ ರಾಜ್ಯೋತ್ಸವ ಕಡ್ಡಾಯ ಆಚರಣೆಗೆ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ನವೆಂಬರ್ 1ರಂದು ರಾಜ್ಯಾದ್ಯಂತ ಎಲ್ಲ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಕಡ್ಡಾಯವಾಗಿ ಹಾಗೂ ಗೌರವಪೂರ್ವಕವಾಗಿ ಆಚರಿಸುವಂತೆ ಶಾಲಾ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ಈ ಬಾರಿ ನವೆಂಬರ್ 1ರಂದು ಭಾನುವಾರವಾಗಿದ್ದರೂ, ರಾಜ್ಯೋತ್ಸವ ಆಚರಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಶಾಲೆಗಳ ಮುಖ್ಯ ಶಿಕ್ಷಕರಿಗೆ ನಿರ್ದೇಶನ ನೀಡಿದ್ದಾರೆ.

ರಾಷ್ಟ್ರೀಯ ಹಬ್ಬಗಳು, ನಾಡಹಬ್ಬವಾದ ಕನ್ನಡ ರಾಜ್ಯೋತ್ಸವ ಹಾಗೂ ಇತರ ಪ್ರಮುಖ ಜಯಂತಿಗಳನ್ನು ನಿಗದಿತ ದಿನಗಳಂದೇ ಎಲ್ಲ ಶಾಲೆಗಳಲ್ಲಿ ನಿಯಮಾನುಸಾರ ಕಡ್ಡಾಯವಾಗಿ ಆಚರಿಸಬೇಕು ಎಂದು ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

# ವಿಜಯಲಕ್ಷ್ಮಿ-ಧನ್ವೀರ್ ನಡುವೆ ವಿವಾದ ತೀವ್ರ; ನಟನ ವಿರುದ್ಧ ಮೂರು ದೂರು

● ವಿಕ್ರಮ ವಾಹಿನಿ । ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮಿ ಹಾಗೂ ದರ್ಶನ್ ಆಪ್ತ ಸ್ನೇಹಿತ, ನಟ ಧನ್ವೀರ್ ಗೌಡ ನಡುವಿನ ವಿವಾದ ಮತ್ತಷ್ಟು ತೀವ್ರಗೊಂಡಿದೆ. ವಿಜಯಲಕ್ಷ್ಮಿ ಅವರಿಗೆ ದೂರವಾಣಿ ಕರೆ ಮೂಲಕ ಬೆದರಿಕೆ ಹಾಕಿ ಕಿರುಕುಳ ನೀಡಿದ್ದಾರೆ ಎಂಬ ಆರೋಪದಡಿ ಧನ್ವೀರ್ ವಿರುದ್ಧ ಬೆಂಗಳೂರಿನ ಮೂರು ಪ್ರತ್ಯೇಕ ಪೊಲೀಸ್ ಠಾಣೆಗಳಲ್ಲಿ ದೂರುಗಳು ದಾಖಲಾಗಿವೆ.

ಈ ಬೆಳವಣಿಗೆಯ ಬೆನ್ನಲ್ಲೇ ಧನ್ವೀರ್ ಸಾಮಾಜಿಕ ಜಾಲತಾಣದಲ್ಲಿ ದರ್ಶನ್ ಅವರ ಕುರಿತಾಗಿ ಪೋಸ್ಟ್ ಹಂಚಿಕೊಂಡಿದ್ದಾರೆ. "ದರ್ಶನ್ ಸರ್ ಅವರ ಖಾತೆಯಿಂದ ನನ್ನನ್ನು ಬ್ಲಾಕ್ ಮಾಡಬಹುದು, ಜನರ ಮುಂದೆ ನನ್ನನ್ನು ಕೆಟ್ಟವನಾಗಿ ಬಿಂಬಿಸಬಹುದು. ನನ್ನ ವಿರುದ್ಧ ನಕಾರಾತ್ಮಕ ಪ್ರಚಾರವನ್ನೂ ಮಾಡಬಹುದು. ಆದರೆ ನನ್ನ ಹೃದಯದಲ್ಲಿ ದರ್ಶನ್ ಸರ್ ಅವರಿಗಿರುವ ಸ್ಥಾನವನ್ನು ಯಾರಿಂದಲೂ ಬದಲಿಸಲು ಸಾಧ್ಯವಿಲ್ಲ" ಎಂದು ಬರೆದುಕೊಂಡಿದ್ದಾರೆ.

"ನನ್ನ ಅಭಿಮಾನ ನಿಮ್ಮ ವಿರೋಧದಿಂದ ಹುಟ್ಟಿದ್ದಲ್ಲ; ನಿಮ್ಮ ವಿರೋಧದಿಂದ ಸಾಯುವುದೂ ಇಲ್ಲ. ಜಗತ್ತು ಏನೇ ಹೇಳಲಿ, ಕಾಲವೇ ಬದಲಾಗಲಿ, ನನ್ನ ನಿಲುವು ಒಂದೇ. ನನ್ನ ಅಭಿಮಾನ ಒಂದೇ, ದರ್ಶನ್ ಸರ್. ದೆನ್, ನೌ, ಫಾರೆವರ್" ಎಂದು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ವಿಜಯಲಕ್ಷ್ಮಿ ಹಾಗೂ ಧನ್ವೀರ್ ನಡುವಿನ ವಿವಾದದ ಕುರಿತು ಈ ಹಿಂದೆ ಪ್ರತಿಕ್ರಿಯಿಸಿದ್ದ ನಟ, ತಮ್ಮ ಬಳಿಯೂ ಆಡಿಯೋ ದಾಖಲೆಗಳಿದ್ದು, ಶೀಘ್ರದಲ್ಲೇ ಬಿಡುಗಡೆ ಮಾಡುವುದಾಗಿ ಹೇಳಿದ್ದರು. ಇದೀಗ ಸಾಮಾಜಿಕ ಜಾಲತಾಣದ ಪೋಸ್ಟ್ ಮೂಲಕ ತಮ್ಮ ನಿಲುವನ್ನು ಮತ್ತೊಮ್ಮೆ ಸ್ಪಷ್ಟಪಡಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಆರೋಪಗಳ ಕುರಿತು ಪೊಲೀಸ್ ತನಿಖೆಯ ವಿವರಗಳು ಲಭ್ಯವಾಗಬೇಕಿದೆ.

# ರಸ್ತೆ ಗುಂಡಿ ತಪ್ಪಿಸಲು ಹೋಗಿ ಯುವತಿ ದುರ್ಮರಣ

● ವಿಕ್ರಮ ವಾಹಿನಿ । ಚಿಕ್ಕೋಡಿ

ರಸ್ತೆ ಗುಂಡಿ ತಪ್ಪಿಸಲು ಹೋಗುವಾಗ ಎರಡು ದ್ವಿಚಕ್ರ ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದು, 27 ವರ್ಷದ ಯುವತಿ ಮೃತಪಟ್ಟಿರುವ ಘಟನೆ ಚಿಕ್ಕೋಡಿ ತಾಲೂಕಿನ ಬೊರಗಾವವಾಡಿ–ಶಿರೋಳೆ ಮಾರ್ಗದಲ್ಲಿ ನಡೆದಿದೆ. ಮೃತರನ್ನು ಪಟ್ಟಣಕುಡಿ ನಿವಾಸಿ ಪ್ರೀತಿ ಬಾಳಾಸೋ ಗೌರಾಯಿ ಎಂದು ಗುರುತಿಸಲಾಗಿದೆ. ಡಿ–ಫಾರ್ಮಸಿ ಪದವೀಧರೆಯಾಗಿದ್ದ ಪ್ರೀತಿ, ಸಹೋದರನೊಂದಿಗೆ ದ್ವಿಚಕ್ರ ವಾಹನದಲ್ಲಿ ಜಯಸಿಂಪುರಕ್ಕೆ ತೆರಳುತ್ತಿದ್ದಾಗ ಎದುರಿನಿಂದ ಬಂದ ಮತ್ತೊಂದು ಬೈಕ್‌ಗೆ ಡಿಕ್ಕಿ ಹೊಡೆದಿದೆ. ತೀವ್ರವಾಗಿ ಗಾಯಗೊಂಡ ಪ್ರೀತಿಯನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಮತ್ತೊಂದು ಬೈಕ್‌ನಲ್ಲಿದ್ದ ಇಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ರಸ್ತೆಯಲ್ಲಿ ದೊಡ್ಡ ಗುಂಡಿಗಳು ಬಿದ್ದಿರುವುದೇ ಅಪಘಾತಕ್ಕೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದು, ರಸ್ತೆ ದುರಸ್ತಿಗೆ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಪಘಾತದ ಬಳಿಕ ಸ್ಥಳೀಯರು ಧಾವಿಸಿ ನೆರವಿಗೆ ಮುಂದಾದರೂ, ಯುವತಿಯ ಜೀವ ಉಳಿಸಲು ಸಾಧ್ಯವಾಗಲಿಲ್ಲ.

# ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ರಂಗನಾಥ್‌ಗೆ ಜಯ

● ವಿಕ್ರಮ ವಾಹಿನಿ । ನವದೆಹಲಿ



ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿ, ಜೆಡಿಎಸ್ ಕಾನೂನು ಘಟಕದ ರಾಜ್ಯಾಧ್ಯಕ್ಷ ಎ.ಪಿ. ರಂಗನಾಥ್ ಭರ್ಜರಿ ಗೆಲುವು ಸಾಧಿಸಿದ್ದಾರೆ. ಈ ಗೆಲುವನ್ನು 'ಸತ್ಯಮೇವ ಜಯತೆ' ಎಂದು ಬಣ್ಣಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಇದು 2028ರ ವಿಧಾನಸಭೆ ಚುನಾವಣೆಗೆ ಸ್ಪಷ್ಟ ಸಂದೇಶ ನೀಡಿದೆ ಎಂದು ಹೇಳಿದ್ದಾರೆ.

ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಚುನಾವಣೆಯಲ್ಲಿ ಸುಳ್ಳು, ದುರಾಡಳಿತ, ಹಣಬಲ ಮತ್ತು ತೋಳ್ಬಲಕ್ಕೆ ಸೋಲಾಗಿದೆ. ಈ ಗೆಲುವು ಹೊಸ ಭರವಸೆಯ ಸೂರ್ಯೋದಯಕ್ಕೆ ನಾಂದಿ ಹಾಡಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ರಂಗನಾಥ್ ಅವರಿಗೆ ಜಯ ತಂದುಕೊಟ್ಟ ಮತದಾರರಿಗೆ, ವಿಶೇಷವಾಗಿ ಆಮಿಷ ಮತ್ತು ಅಧಿಕಾರದ ದರ್ಪವನ್ನು ತಿರಸ್ಕರಿಸಿ ಮತ ಚಲಾಯಿಸಿದ ಶಿಕ್ಷಕರಿಗೆ ಹೃದಯಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದ್ದಾರೆ. ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರ ಒಗ್ಗಟ್ಟಿನ ಪ್ರಯತ್ನವನ್ನು ಶ್ಲಾಘಿಸಿದ್ದಾರೆ.

ಈ ಗೆಲುವು ಐತಿಹಾಸಿಕವಾಗಿದ್ದು, ಮೈತ್ರಿಯಲ್ಲಿ ಶಕ್ತಿ ಇದೆ ಎಂಬುದನ್ನು ಸಾಬೀತುಪಡಿಸಿದೆ. ಈ ದೀಪಾವಳಿಯಿಂದಲೇ ನರಕಾಸುರನ ಪತನ ಆರಂಭವಾಗಿದ್ದು, ಮುಂದಿನ ದೀಪಾವಳಿಗೆ ಕನ್ನಡ ನಾಡಿನಲ್ಲಿ ಮೈತ್ರಿಯ ಮುಂಬೆಳಕು ಮೂಡುವುದು ಖಚಿತ ಎಂದು ಕುಮಾರಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಮೈತ್ರಿಕೂಟಕ್ಕೆ ಪ್ರೇರಕ ಶಕ್ತಿಯಾಗಿದ್ದಾರೆ ಎಂದು ಹೇಳಿರುವ ಅವರು, ಉಳಿದ ಮೂರು ಕ್ಷೇತ್ರಗಳಲ್ಲಿಯೂ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ವಿಷಾನಿಲಕ್ಕೆ ಮೂವರು ಬಲಿ; ನೈತಿಕ ಪೊಲೀಸ್‌ಗಿರಿ ಆರೋಪಿಗೆ ಆತ್ಮಹತ್ಯೆ

● ವಿಕ್ರಮ ವಾಹಿನಿ । ಕುಮಟಾ

ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ತದಡಿ ಮೀನುಗಾರಿಕಾ ಬಂದರಿನಲ್ಲಿ ಬೋಟ್‌ನ ಮೀನು ಸಂಗ್ರಹಣಾ ಕೊಠಡಿ ಸ್ವಚ್ಛಗೊಳಿಸುವ ವೇಳೆ ವಿಷಕಾರಿ ಅನಿಲ ಸೇವಿಸಿ ಮೂವರು ಮೀನುಗಾರರು ಮೃತಪಟ್ಟಿದ್ದಾರೆ. ಘಟನೆಯಲ್ಲಿ ಮತ್ತಿಬ್ಬರನ್ನು ರಕ್ಷಿಸಲಾಗಿದ್ದು, ಅವರಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದೆ.

ಮೃತರನ್ನು ನೌಶಾದ್ (48), ಅಮೀನ್ (40) ಮತ್ತು ಅಮನ್ (26) ಎಂದು ಗುರುತಿಸಲಾಗಿದೆ. 'ಕುಚ್ಚೈಮಾ' ಹೆಸರಿನ ಬೋಟ್‌ನಲ್ಲಿ ಮೀನುಗಾರರು ಮೀನುಗಾರಿಕೆ ಮುಗಿಸಿ ಬಂದರಿಗೆ ಮರಳಿದ್ದರು. ಮೀನು ಮತ್ತು ಮಂಜುಗಡ್ಡೆಯನ್ನು ಖಾಲಿ ಮಾಡಿದ ಬಳಿಕ ಬೋಟ್‌ನ ಕೆಳಭಾಗದಲ್ಲಿರುವ ಮೀನು ಸಂಗ್ರಹಣಾ ಕೊಠಡಿಯನ್ನು ಸ್ವಚ್ಛಗೊಳಿಸಲು ಇಳಿದಿದ್ದಾರೆ. ಈ ವೇಳೆ ಕೊಳೆತ ಮೀನುಗಳ ತ್ಯಾಜ್ಯದಿಂದ ಉತ್ಪತ್ತಿಯಾಗಿದ್ದ ವಿಷಕಾರಿ ಅನಿಲದಿಂದ ಉಸಿರುಗಟ್ಟಿ ಮೂವರು ಮೃತಪಟ್ಟಿದ್ದಾರೆ ಎನ್ನಲಾಗಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ರಕ್ಷಣಾ ಕಾರ್ಯಾಚರಣೆ ನಡೆಸಿ ಮತ್ತಿಬ್ಬರು ಮೀನುಗಾರರನ್ನು ಹೊರತರಲಾಗಿದೆ. ಈ ಸಂಬಂಧ ಗೋಕರ್ಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ದುರಂತಕ್ಕೆ ನಿಖರ ಕಾರಣವೇನು ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ನೈತಿಕ ಪೊಲೀಸ್‌ಗಿರಿ ಪ್ರಕರಣ: ಆರೋಪಿ ಆತ್ಮಹತ್ಯೆ

● ವಿಕ್ರಮ ವಾಹಿನಿ । ಮಂಗಳೂರು

ನೈತಿಕ ಪೊಲೀಸ್‌ಗಿರಿ ನಡೆಸಿದ ಆರೋಪದಡಿ ಪ್ರಕರಣ ದಾಖಲಾಗಿದ್ದ ವ್ಯಕ್ತಿಯೊಬ್ಬರು ಮಂಗಳೂರಿನ ಹೊರವಲಯದ ಹೊಸಬೆಟ್ಟುವಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತರನ್ನು ಹೊಸಬೆಟ್ಟು ನಿವಾಸಿ ಸೋಮನಾಥ್ (48) ಎಂದು ಗುರುತಿಸಲಾಗಿದೆ.

ಅಕ್ಟೋಬರ್ 25ರ ರಾತ್ರಿ ಹೊಸಬೆಟ್ಟು ಬೀಚ್ ಸಮೀಪ ಸಂಚರಿಸುತ್ತಿದ್ದ ದಂಪತಿಯನ್ನು ಸೋಮನಾಥ್ ಮತ್ತು ಅವರ ಸ್ನೇಹಿತರ ತಂಡ ತಡೆದು ಪ್ರಶ್ನಿಸಿತ್ತು ಎನ್ನಲಾಗಿದೆ. ಈ ಸಂಬಂಧ ದಂಪತಿ ಸುರತ್ಕಲ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ವಿಚಾರಣೆಗೆ ಹಾಜರಾಗುವಂತೆ ಸೋಮನಾಥ್ ಅವರಿಗೆ ನೋಟಿಸ್ ನೀಡಿದ್ದರು ಎಂದು ತಿಳಿದುಬಂದಿದೆ.

ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಸೋಮನಾಥ್ ಮನನೊಂದಿದ್ದರು ಎನ್ನಲಾಗಿದ್ದು, ಸೋಮವಾರ ಬೆಳಗ್ಗೆ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣು ಬಿಗಿದುಕೊಂಡಿದ್ದಾರೆ. ಅವರನ್ನು ಗಮನಿಸಿದವರು ಆಸ್ಪತ್ರೆಗೆ ಕರೆದೊಯ್ಯುವ ಪ್ರಯತ್ನ ಮಾಡಿದರೂ, ಅವರು ಮೃತಪಟ್ಟಿರುವುದು ತಿಳಿದುಬಂದಿದೆ ಎಂದು ವರದಿಯಾಗಿದೆ. ಈ ಸಂಬಂಧ ಸುರತ್ಕಲ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಕನ್ನಡಿಗರಿಗೆ ಉದ್ಯೋಗ ನಿರಾಕರಣೆ: ಕೊನೆಗೂ ಕ್ಷಮೆಯಾಚಿಸಿದ ಸಂಸ್ಥೆ

● ವಿಕ್ರಮ ವಾಹಿನಿ । ಬೆಂಗಳೂರು

ಉದ್ಯೋಗಾಕಾಂಕ್ಷಿಯೊಬ್ಬರ ರೆಸ್ಯೂಮ್‌ನಲ್ಲಿ ಕನ್ನಡ ಮಾತೃಭಾಷೆ ಎಂದು ನಮೂದಿಸಿದ್ದ ಕಾರಣಕ್ಕೆ ಕೆಲಸ ನಿರಾಕರಿಸಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಖಾಸಗಿ ಸಾಫ್ಟ್‌ವೇರ್ ಸಂಸ್ಥೆಯ ವಿರುದ್ಧ ಕನ್ನಡಿಗರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಕನ್ನಡ ಸಂಘಟನೆಗಳು ವಿರೋಧ ವ್ಯಕ್ತಪಡಿಸಿದ ಬೆನ್ನಲ್ಲೇ ಸಂಸ್ಥೆಯ ಪ್ರತಿನಿಧಿ ಕ್ಷಮೆಯಾಚಿಸಿದ್ದು, ಇಂತಹ ಘಟನೆ ಮರುಕಳಿಸದಂತೆ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ.

ಇತ್ತೀಚೆಗೆ ಉದ್ಯೋಗಾವಕಾಶ ವಂಚಿತಳಾದ ಯುವತಿಯೊಬ್ಬರು ತಮ್ಮ ಅನುಭವ ಹಂಚಿಕೊಂಡಿದ್ದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿ, ಉದ್ಯೋಗ ನೇಮಕಾತಿಯಲ್ಲಿ ಕನ್ನಡಿಗರ ವಿರುದ್ಧ ತಾರತಮ್ಯ ನಡೆಯುತ್ತಿದೆಯೇ ಎಂಬ ಚರ್ಚೆಗೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಕನ್ನಡ ಸಂಘಟನೆಗಳ ಕಾರ್ಯಕರ್ತರು ಬೆಂಗಳೂರಿನ ಇಂದಿರಾನಗರದಲ್ಲಿರುವ ಸಂಬಂಧಿತ ಸಂಸ್ಥೆಗೆ ಭೇಟಿ ನೀಡಿ ಆಕ್ರೋಶ ವ್ಯಕ್ತಪಡಿಸಿದರು. ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸುವಲ್ಲಿ ತಾರತಮ್ಯ ಮಾಡಬಾರದು ಎಂದು ಆಗ್ರಹಿಸಿದರು.

ಈ ಕುರಿತು ಪ್ರತಿಕ್ರಿಯಿಸಿದ ಸಂಸ್ಥೆಯ ಪ್ರತಿನಿಧಿ, ಕನ್ನಡವನ್ನು ಉದ್ದೇಶಪೂರ್ವಕವಾಗಿ ಅವಮಾನಿಸುವ ಉದ್ದೇಶ ಇರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸಂಸ್ಥೆಯ ಶಾಖೆಗಳು ವಿವಿಧ ರಾಜ್ಯಗಳಲ್ಲಿದ್ದು, ಆಯಾ ರಾಜ್ಯಗಳಿಗೆ ಅನುಗುಣವಾಗಿ ತೆಲುಗು ಮತ್ತು ತಮಿಳು ಭಾಷೆಗಳ ಜ್ಞಾನಕ್ಕೆ ಆದ್ಯತೆ ನೀಡುವ ಷರತ್ತುಗಳನ್ನು ಉಲ್ಲೇಖಿಸಲಾಗಿತ್ತು ಎಂದು ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ತಪ್ಪುಗಳು ಮರುಕಳಿಸದಂತೆ ಎಚ್ಚರ ವಹಿಸುವುದಾಗಿ ಹಾಗೂ ಕನ್ನಡಿಗರಿಗೆ ಆದ್ಯತೆ ನೀಡುವ ಕುರಿತು ಭರವಸೆ ನೀಡಿದ್ದಾರೆ.

**ಕನ್ನಡಿಗರ ಹಿತ ರಕ್ಷಣೆಗೆ ಕಟ್ಟುನಿಟ್ಟಿನ ನೀತಿಗೆ ಆಗ್ರಹ**

ರಾಜ್ಯೋತ್ಸವದ ಸಂಭ್ರಮದ ನಡುವೆಯೇ ಕನ್ನಡಿಗರಿಗೆ ಉದ್ಯೋಗಾವಕಾಶ ಮತ್ತು ರಾಜ್ಯದ ಹಿತಾಸಕ್ತಿ ರಕ್ಷಣೆಯ ವಿಚಾರ ಮತ್ತೆ ಮುನ್ನೆಲೆಗೆ ಬಂದಿದೆ. ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಟಿ.ಎ. ನಾರಾಯಣಗೌಡ ಅವರು ರಾಜ್ಯದಲ್ಲಿ ವಲಸೆ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ನೀತಿ ರೂಪಿಸುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

ರಾಜ್ಯದ ಜಲ, ನೆಲ ಮತ್ತು ಕನ್ನಡಿಗರ ಹಿತಾಸಕ್ತಿ ರಕ್ಷಣೆಯಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಆರೋಪಿಸಿದ ಅವರು, ಕನ್ನಡಿಗರ ಹಿತಕ್ಕಿಂತ ರಾಜಕೀಯವೇ ಮುಖ್ಯವಾಗಿದೆಯೇ ಎಂದು ಪ್ರಶ್ನಿಸಿದ್ದಾರೆ.

ಕಾರ್ಪೊರೇಟ್ ಸಂಸ್ಥೆಗಳ ಒತ್ತಡಕ್ಕೆ ಸರ್ಕಾರ ಮಣಿಯದೆ, ಕನ್ನಡಿಗರ ಉದ್ಯೋಗಾವಕಾಶಗಳನ್ನು ರಕ್ಷಿಸಲು ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ರಾಜ್ಯೋತ್ಸವದ ಧ್ವಜಾರೋಹಣಕ್ಕೂ ಮುನ್ನವೇ ಈ ಕುರಿತು ಸರ್ಕಾರ ಸ್ಪಷ್ಟ ನಿಲುವು ಪ್ರಕಟಿಸಬೇಕು ಎಂದು ಆಗ್ರಹಿಸಿದ್ದಾರೆ.

# ಔಷಧ ಕಂಪನಿಗಳ ಪರವೇ ಇಡೀ ವ್ಯವಸ್ಥೆ? ಕೇಂದ್ರಕ್ಕೆ ಸುಪ್ರೀಂ ತರಾಟೆ

● ವಿಕ್ರಮ ವಾಹಿನಿ । ನವದೆಹಲಿ

ಔಷಧಗಳ ಗರಿಷ್ಠ ಚಿಲ್ಲರೆ ಬೆಲೆ (ಎಂಆರ್‌ಪಿ) ಮತ್ತು ವ್ಯಾಪಾರಿಗಳು ಖರೀದಿಸುವ ದರದ ನಡುವಿನ ಭಾರಿ ಅಂತರದ ಕುರಿತು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಔಷಧ ಕಂಪನಿಗಳಿಗೆ ಅನುಕೂಲ ಮಾಡಿಕೊಡಲು ಇಡೀ ವ್ಯವಸ್ಥೆ ಕೆಲಸ ಮಾಡುತ್ತಿದೆಯೇ ಎಂದು ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠ ಪ್ರಶ್ನಿಸಿದೆ.

ಕ್ಯಾನ್ಸರ್ ಔಷಧಗಳಂತೆ ಇತರ ಅಗತ್ಯ ಹಾಗೂ ಜೀವ ರಕ್ಷಕ ಔಷಧಗಳ ಲಾಭಾಂಶಕ್ಕೂ ಮಿತಿ ವಿಧಿಸದಿರುವುದಕ್ಕೆ ನ್ಯಾಯಾಲಯ ಆಕ್ಷೇಪ ವ್ಯಕ್ತಪಡಿಸಿದೆ.

ಭಾರತದಲ್ಲಿ ಔಷಧಗಳ ಬೆಲೆ ಜಾಗತಿಕ ಮಟ್ಟಕ್ಕೆ ಹೋಲಿಸಿದರೆ ಕಡಿಮೆ ಇದೆ ಎಂದು ಕೇಂದ್ರ ಸರ್ಕಾರ ಸಮರ್ಥಿಸಿಕೊಂಡಿದ್ದು, ಪ್ರಕರಣದ ತೀರ್ಪನ್ನು ನ್ಯಾಯಾಲಯ ಕಾಯ್ದಿರಿಸಿದೆ.

ಔಷಧಗಳ ಬೆಲೆ ನಿಯಂತ್ರಿಸಬೇಕಾದ ರಾಷ್ಟ್ರೀಯ ಔಷಧೀಯ ಬೆಲೆ ಪ್ರಾಧಿಕಾರದ ಕಾರ್ಯವೈಖರಿಯ ಬಗ್ಗೆಯೂ ನ್ಯಾಯಪೀಠ ಅಸಮಾಧಾನ ವ್ಯಕ್ತಪಡಿಸಿದೆ.

# ಜೀವನದಲ್ಲಿ ಯಶಸ್ಸಿಗೆ ಸ್ಪರ್ಧಾ ಮನೋಭಾವ ಅಗತ್ಯ: ಡಾ. ಗಿರಿಧರ ಕಜೆ

● ವಿಕ್ರಮ ವಾಹಿನಿ । ಬೆಂಗಳೂರು



ಜೀವನದ ಸವಾಲುಗಳನ್ನು ಎದುರಿಸಲು ಪ್ರತಿಯೊಬ್ಬರೂ ಮಾನಸಿಕವಾಗಿ ಬಲಿಷ್ಠರಾಗಿರಬೇಕು. ಸ್ಪರ್ಧಾ ಮನೋಭಾವ ಬೆಳೆಸಿಕೊಂಡಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಹವ್ಯಕ ಮಹಾಸಭೆಯ ಅಧ್ಯಕ್ಷ ಡಾ. ಗಿರಿಧರ ಕಜೆ ಹೇಳಿದರು.

ಮಲ್ಲೇಶ್ವರದ ಹವ್ಯಕ ಭವನದಲ್ಲಿ ಅ.25ರಂದು ನಡೆದ ಹವ್ಯಕ ಮಹಾಸಭೆಯ 'ಪ್ರತಿಬಿಂಬ' ಸ್ಪರ್ಧಾ ಸೌರಭದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದಿನ ಮಕ್ಕಳು ವಿದ್ಯುನ್ಮಾನ ಸಾಧನಗಳ ಬಳಕೆಗೆ ಹೆಚ್ಚು ಒಗ್ಗಿಕೊಳ್ಳುತ್ತಿರುವ ಸಂದರ್ಭದಲ್ಲಿ, ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಆಶಾದಾಯಕವಾಗಿದೆ.

ಮಕ್ಕಳಲ್ಲಿ ಪ್ರತಿಭೆ, ಆತ್ಮವಿಶ್ವಾಸ ಮತ್ತು ಸ್ಪರ್ಧಾ ಮನೋಭಾವ ಬೆಳೆಸಲು ಇಂತಹ ಕಾರ್ಯಕ್ರಮಗಳು ಅಗತ್ಯ ಎಂದು ತಿಳಿಸಿದರು.

ಭಾರತದಲ್ಲಿ ಯುವಜನರ ಸಂಖ್ಯೆ ಹೆಚ್ಚಿದ್ದು, ಶಿಕ್ಷಣ, ಉದ್ಯೋಗ ಮತ್ತು ಉದ್ಯಮ ಕ್ಷೇತ್ರಗಳಲ್ಲಿ ಸ್ಪರ್ಧೆ ತೀವ್ರಗೊಳ್ಳುತ್ತಿದೆ. ಮುಂದಿನ ಹತ್ತು ವರ್ಷಗಳಲ್ಲಿ ಯುವಜನರು ತಮ್ಮ ಸಮವಯಸ್ಕರಿಂದಲೇ ಹಲವು ಪಟ್ಟು ಹೆಚ್ಚಿನ ಸ್ಪರ್ಧೆ ಎದುರಿಸಬೇಕಾಗುತ್ತದೆ. ಆದ್ದರಿಂದ ಭವಿಷ್ಯದ ಸವಾಲುಗಳನ್ನು ಎದುರಿಸಲು ಇಂದಿನಿಂದಲೇ ಸಿದ್ಧರಾಗಬೇಕು ಎಂದು ಕಿವಿಮಾತು ಹೇಳಿದರು.

ಡಿ. 20ಕ್ಕೆ ಮಾತೃ ಸಂಗಮ: ದೇಶ–ವಿದೇಶಗಳ 83 ಪ್ರಾಂತ್ಯಗಳಲ್ಲಿ ಹವ್ಯಕ ಮಹಿಳಾ ವೇದಿಕೆಗಳನ್ನು ರಚಿಸಲಾಗುತ್ತಿದೆ. ಇದರ ಅಂಗವಾಗಿ ಡಿ.20ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಬೃಹತ್ 'ಮಾತೃ ಸಂಗಮ' ಕಾರ್ಯಕ್ರಮ ಆಯೋಜಿಸಲಾಗುವುದು. ಮಹಿಳೆಯರ ಸಾಧನೆಯನ್ನು ಗೌರವಿಸುವ ಹಾಗೂ ಸ್ತ್ರೀಶಕ್ತಿಯನ್ನು ಸಂಭ್ರಮಿಸುವುದು ಇದರ ಉದ್ದೇಶ ಎಂದು ತಿಳಿಸಿದರು.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವ ಡಾ. ರಾಮಕೃಷ್ಣ ಭಟ್ ಕೂಟೇಲು ಮಾತನಾಡಿ, ಭಾರತೀಯ ತತ್ತ್ವಶಾಸ್ತ್ರದಲ್ಲಿನ ಬಿಂಬ–ಪ್ರತಿಬಿಂಬ ಸಿದ್ಧಾಂತವು ಮಹತ್ವದ್ದಾಗಿದೆ. 'ಪ್ರತಿಬಿಂಬ' ಸ್ಪರ್ಧೆಗಳು ಮಕ್ಕಳಲ್ಲಿ ಪ್ರತಿಭೆ ಬೆಳೆಸುವುದರ ಜತೆಗೆ ಜೀವನದ ಸವಾಲುಗಳನ್ನು ಎದುರಿಸಲು ಪ್ರೇರಣೆ ನೀಡುತ್ತವೆ ಎಂದರು.

ಹಿರಿಯ ನ್ಯಾಯವಾದಿ ವಿಘ್ನೇಶ್ವರ ಶಾಸ್ತ್ರಿ ಮಾತನಾಡಿ, ಹವ್ಯಕ ಮಹಾಸಭೆ ಸಮಾಜ ಸಂಘಟನೆ ಹಾಗೂ ಸಂಸ್ಕಾರಗಳ ಸಂರಕ್ಷಣೆಗೆ ವಿಶೇಷ ಒತ್ತು ನೀಡುತ್ತಿದೆ. ಹಿರಿಯರು ಮತ್ತು ಯುವಕರು ಒಟ್ಟಾಗಿ ಭಾಗವಹಿಸುತ್ತಿರುವುದು ಸಮಾಜದ ಭವಿಷ್ಯದ ಬಗ್ಗೆ ಭರವಸೆ ಮೂಡಿಸಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ 20 ಪ್ರಾಂತ್ಯಗಳ ಹವ್ಯಕ ಮಹಿಳಾ ವೇದಿಕೆಗಳನ್ನು ಉದ್ಘಾಟಿಸಲಾಯಿತು. ಶೈಕ್ಷಣಿಕ ಸಾಧನೆ ಮಾಡಿದ ಮಕ್ಕಳಿಗೆ 'ಪಲ್ಲವ' ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ವಯೋಮಾನದ ಸ್ಪರ್ಧಿಗಳು ಸಾಂಪ್ರದಾಯಿಕ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.

ಮಹಾಸಭೆಯ ಉಪಾಧ್ಯಕ್ಷ ಶ್ರೀಧರ ಜೆ. ಭಟ್ಟ ಕೆಕ್ಕಾರು, ಪ್ರಧಾನ ಕಾರ್ಯದರ್ಶಿ ಸಿ.ಎ. ವೇಣುವಿಘ್ನೇಶ ಸಂಪ, ಕಾರ್ಯದರ್ಶಿಗಳಾದ ಪ್ರಶಾಂತ ಭಟ್ ಮಲವಳ್ಳಿ, ಆದಿತ್ಯ ಹೆಗಡೆ ಕಲಗಾರು ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಡಿಸಿಎಂ ಪರಮೇಶ್ವರ್‌ಗೆ ಆರೋಗ್ಯದಲ್ಲಿ ಏರುಪೇರು; ಆಸ್ಪತ್ರೆಗೆ ದಾಖಲು

● ವಿಕ್ರಮ ವಾಹಿನಿ | ಬೆಂಗಳೂರು

ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.



ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವೇಳೆ ಅವರಿಗೆ ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದಿದ್ದು, ತಕ್ಷಣ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಲಾಗಿದೆ.

ವಿಷಯ ತಿಳಿದ ಕೂಡಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವರಾದ ಯು.ಟಿ. ಖಾದರ್ ಮತ್ತು ಪ್ರಿಯಾಂಕ್ ಖರ್ಗೆ ಆಸ್ಪತ್ರೆಗೆ ಭೇಟಿ ನೀಡಿ ಪರಮೇಶ್ವರ್ ಅವರ ಆರೋಗ್ಯ ವಿಚಾರಿಸಿದರು. ಈ ಕುರಿತು ಮಾಹಿತಿ ನೀಡಿದ ಆರೋಗ್ಯ ಸಚಿವ ಯು.ಟಿ. ಖಾದರ್, ಪರಮೇಶ್ವರ್ ಅವರು ಚಿಕಿತ್ಸೆ ಪಡೆಯುತ್ತಿದ್ದು, ಸದ್ಯ ಯಾವುದೇ ತೊಂದರೆಯಿಲ್ಲ. ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು.

## 12 ದಿನಗಳಲ್ಲಿ ರೂ 733 ಕೋಟಿ ಗಳಿಸಿದ 'ಜೈಲರ್ 2'

● ವಿಕ್ರಮ ವಾಹಿನಿ | ಬೆಂಗಳೂರು

ಸೂಪರ್‌ಸ್ಟಾರ್ ರಜನಿಕಾಂತ್ ಅಭಿನಯದ 'ಜೈಲರ್ 2' ಚಿತ್ರವು ಬಾಕ್ಸ್‌ಆಫೀಸ್‌ನಲ್ಲಿ ಭರ್ಜರಿ ಗಳಿಕೆ ಮುಂದುವರಿಸಿದೆ. ಬಿಡುಗಡೆಯಾದ 12 ದಿನಗಳಲ್ಲಿ ವಿಶ್ವದಾದ್ಯಂತ ರೂ 733.35 ಕೋಟಿ ಗಳಿಸಿದ್ದು, ಭಾರತದಲ್ಲಿ ರೂ 408.15 ಕೋಟಿ ನಿವ್ವಳ ಕಲೆಕ್ಷನ್ ಮಾಡಿದೆ ಎಂದು ವರದಿಯಾಗಿದೆ.

ನೆಲ್ಸನ್ ದಿಲೀಪ್‌ಕುಮಾರ್ ನಿರ್ದೇಶನದ ಈ ಚಿತ್ರವು ಭಾರತದಲ್ಲಿ ಒಟ್ಟು ರೂ 477.85 ಕೋಟಿ ಗಳಿಸಿದ್ದರೆ, ವಿದೇಶಿ ಮಾರುಕಟ್ಟೆಯಲ್ಲಿ ರೂ 255.50 ಕೋಟಿ ಆದಾಯ ಗಳಿಸಿದೆ. ಎರಡನೇ ಸೋಮವಾರದಂದು ಚಿತ್ರದ ಗಳಿಕೆ ಸ್ವಲ್ಪ ಇಳಿಕೆಯಾಗಿದ್ದರೂ, ಪ್ರೇಕ್ಷಕರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದೆ.

**ಒಟಿಟಿ ಬಿಡುಗಡೆ ಮುಂದೂಡಲು ಮನವಿ:** ಚಿತ್ರದ ಯಶಸ್ಸಿನ ಹಿನ್ನೆಲೆಯಲ್ಲಿ ಚಿತ್ರಮಂದಿರಗಳಲ್ಲಿ ಪ್ರದರ್ಶನ ಮುಂದುವರಿಸಲು ಅವಕಾಶ ನೀಡುವ ಉದ್ದೇಶದಿಂದ, ಚಿತ್ರದ ಒಟಿಟಿ ಬಿಡುಗಡೆಯನ್ನು ಮುಂದೂಡುವಂತೆ ನಿರ್ಮಾಣ ಸಂಸ್ಥೆ ಸನ್ ಪಿಕ್ಚರ್ಸ್‌ಗೆ ಮನವಿ ಮಾಡಲಾಗಿದೆ ಎಂದು ವಿತರಕ ತಿರುಪ್ಪೂರ್ ಸುಬ್ರಮಣಿಯಂ ತಿಳಿಸಿದ್ದಾರೆ. ಆದರೆ, ಒಟಿಟಿ ಬಿಡುಗಡೆಯ ಹೊಸ ದಿನಾಂಕದ ಬಗ್ಗೆ ಅಧಿಕೃತ ಘೋಷಣೆ ಹೊರಬಿದ್ದಿಲ್ಲ.

**ತಾರಾಗಣದ ಮೆರುಗು:** ಸನ್ ಪಿಕ್ಚರ್ಸ್ ಬ್ಯಾನರ್‌ನಲ್ಲಿ ಕಲಾನಿಧಿ ಮಾರನ್ ನಿರ್ಮಿಸಿರುವ ಚಿತ್ರಕ್ಕೆ ಅನಿರುದ್ಧ್ ರವಿಚಂದರ್ ಸಂಗೀತ ಸಂಯೋಜಿಸಿದ್ದಾರೆ. ಶಿವರಾಜ್‌ಕುಮಾರ್, ಮೋಹನ್‌ಲಾಲ್, ವಿದ್ಯಾ ಬಾಲನ್, ಮಿಥುನ್ ಚಕ್ರವರ್ತಿ, ಜಾಕಿ ಶ್ರಾಫ್, ಎಸ್.ಜೆ. ಸೂರ್ಯ, ವಿಜಯ್ ಸೇತುಪತಿ ಮತ್ತು ರಮ್ಯಾ ಕೃಷ್ಣನ್ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ. ಚಿತ್ರದ ಮುಂದಿನ ಗಳಿಕೆ ಪ್ರೇಕ್ಷಕರ ಪ್ರತಿಕ್ರಿಯೆ ಹಾಗೂ ಹೊಸ ಚಿತ್ರಗಳ ಪೈಪೋಟಿಯನ್ನು ಅವಲಂಬಿಸಿದೆ.

## ಆನ್‌ಲೈನ್ ಬೆಟ್ಟಿಂಗ್ ಹಗರಣ: ರೂ 23.35 ಕೋಟಿ ಆಸ್ತಿ ಜಪ್ತಿ

● ವಿಕ್ರಮ ವಾಹಿನಿ | ಬೆಂಗಳೂರು

ಅಕ್ರಮ ಆನ್‌ಲೈನ್ ಬೆಟ್ಟಿಂಗ್ ಮತ್ತು ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಶಾಸಕ ಕೆ.ಸಿ. ವೀರೇಂದ್ರ ಸೇರಿದಂತೆ ಮೂವರು ಆರೋಪಿಗಳಿಗೆ ಸೇರಿದ 23.35 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ಜಾರಿ ನಿರ್ದೇಶನಾಲಯ (ಇಡಿ) ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ.

ಕೆ.ಸಿ. ವೀರೇಂದ್ರ, ಗುಲ್ಷನ್ ಖಟ್ಟರ್ ಮತ್ತು ನೇಹಾ ಟಂಡನ್ ಅವರಿಗೆ ಸೇರಿದ 13.76 ಕೋಟಿ ರೂ. ಮೌಲ್ಯದ ಚರಾಸ್ತಿ ಹಾಗೂ 9.58 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿಗಳನ್ನು ಜಪ್ತಿ ಮಾಡಲಾಗಿದೆ. 'ಕಿಂಗ್ 567' ಸೇರಿದಂತೆ ಅಕ್ರಮ ಬೆಟ್ಟಿಂಗ್ ಆಪ್‌ಗಳ ಮೂಲಕ ಹಣ ಸಂಗ್ರಹಿಸಿ, ಹವಾಲಾ ಹಾಗೂ ವಿದೇಶಿ ಹಣ ವರ್ಗಾವಣೆ ಮಾರ್ಗಗಳ ಮೂಲಕ 2,300 ಕೋಟಿ ರೂ.ಗೂ ಅಧಿಕ ಅಕ್ರಮ ಹಣ ವರ್ಗಾವಣೆ ನಡೆದಿದೆ ಎಂದು ಇಡಿ ತಿಳಿಸಿದೆ. ಈ ಹಿಂದೆ ದೇಶದ 60ಕ್ಕೂ ಹೆಚ್ಚು ಸ್ಥಳಗಳಲ್ಲಿ ದಾಳಿ ನಡೆಸಿ ನಗದು, ಚಿನ್ನಾಭರಣ, ವಾಹನಗಳು ಮತ್ತು ಡಿಜಿಟಲ್ ಸಾಧನಗಳನ್ನು ವಶಪಡಿಸಿಕೊಳ್ಳಲಾಗಿತ್ತು. ಪ್ರಕರಣದಲ್ಲಿ ಈವರೆಗೆ ಒಟ್ಟು 343 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದ್ದು, ತನಿಖೆ ಮುಂದುವರಿದಿದೆ.

## ಎಸ್‌ಐಆರ್ ಅಫಿಡವಿಟ್‌ಗೆ ಪ್ರತಿಕ್ರಿಯಿಸಲು ಅರ್ಜಿದಾರರಿಗೆ 10 ದಿನಗಳ ಗಡುವು

**ಎಸ್‌ಐಆರ್ ಪ್ರಕ್ರಿಯೆ ಸಮರ್ಥಿಸಿಕೊಂಡು ಚುನಾವಣಾ ಆಯೋಗ ಸಲ್ಲಿಸಿರುವ ಅಫಿಡವಿಟ್‌ಗೆ ಪ್ರತಿಕ್ರಿಯಿಸಲು ಅರ್ಜಿದಾರರಿಗೆ ಸುಪ್ರೀಂ ಕೋರ್ಟ್ 10 ದಿನಗಳ ಗಡುವು ನೀಡಿದೆ. ಫಾರ್ಮ್ 6ರಲ್ಲಿ ಯಾವುದೇ ತಿದ್ದುಪಡಿ ಮಾಡಿಲ್ಲ ಎಂದು ಆಯೋಗ ಸ್ಪಷ್ಟಪಡಿಸಿದ್ದು, ಎಸ್‌ಐಆರ್‌ಗೆ ಮೂವರು ಚುನಾವಣಾ ಆಯುಕ್ತರು ಸರ್ವಾನುಮತದ ಅನುಮೋದನೆ ನೀಡಿದ್ದಾರೆ ಎಂದು ಅಫಿಡವಿಟ್‌ನಲ್ಲಿ ತಿಳಿಸಿದೆ.**

● ವಿಕ್ರಮ ವಾಹಿನಿ | ನವದೆಹಲಿ

ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಸಮರ್ಥಿಸಿಕೊಂಡು ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಅಫಿಡವಿಟ್‌ಗೆ ಪ್ರತಿಕ್ರಿಯೆ ನೀಡಲು ಅರ್ಜಿದಾರರಿಗೆ ನ್ಯಾಯಾಲಯ 10 ದಿನಗಳ ಕಾಲಾವಕಾಶ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜಾಯ್ಮಾಲ್ಯ ಬಾಗ್ಚಿ ಮತ್ತು ವಿ. ಮೋಹನ ಅವರನ್ನೊಳಗೊಂಡ ನ್ಯಾಯಪೀಠವು, ರಾಜ್ಯಸಭಾ ಸದಸ್ಯೆ ಡೋಲಾ ಸೇನ್ ಸಲ್ಲಿಸಿರುವ ಹೊಸ ಅರ್ಜಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಮತ್ತು ಇತರರಿಗೆ ನೋಟಿಸ್ ಜಾರಿ ಮಾಡಿದೆ.

ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸುವ ವೇಳೆ, ಸುಪ್ರೀಂ ಕೋರ್ಟ್‌ನ ಅನುಮೋದನೆಯಿಲ್ಲದೆ ಮತದಾರರ ನೋಂದಣಿಗೆ ಬಳಸುವ 'ಫಾರ್ಮ್ 6'ರಲ್ಲಿ ಬದಲಾವಣೆಗಳನ್ನು ಮಾಡಲಾಗಿದೆ ಎಂದು ಡೋಲಾ ಸೇನ್ ತಮ್ಮ ಅರ್ಜಿಯಲ್ಲಿ



ಆರೋಪಿಸಿದ್ದಾರೆ. ಸೇನ್ ಪರ ವಾದ ಮಂಡಿಸಿದ ಹಿರಿಯ ವಕೀಲೆ ಮಾನೇಕಾ ಗುರುಸ್ವಾಮಿ, ಫಾರ್ಮ್ 6ರಲ್ಲಿನ ಬದಲಾವಣೆಗಳಿಗೆ ಸುಪ್ರೀಂ ಕೋರ್ಟ್ ಅನುಮೋದನೆ ನೀಡಿದೆ ಎಂದು ಚುನಾವಣಾ ಆಯೋಗ ತಪ್ಪಾಗಿ ಪ್ರತಿಪಾದಿಸಿದೆ ಎಂದು ನ್ಯಾಯಪೀಠದ ಗಮನಕ್ಕೆ ತಂದರು.

ಈ ಕುರಿತು ಎಲ್ಲ ಅಂಶಗಳನ್ನು ಪರಿಶೀಲಿಸುವುದಾಗಿ ತಿಳಿಸಿದ ನ್ಯಾಯಪೀಠ, ಸೋಮವಾರ ತಡರಾತ್ರಿ ಚುನಾವಣಾ ಆಯೋಗ ಸಲ್ಲಿಸಿರುವ ಪ್ರತಿಕ್ರಿಯೆಗೆ ತಮ್ಮ ವಾದವನ್ನು ದಾಖಲಿಸುವಂತೆ ಮೊದಲ ಅರ್ಜಿದಾರ ರಾಕೇಶ್ ಕುಮಾರ್ ಸಿಂಗ್ ಪರ ವಕೀಲ ವಿಕಾಸ್ ಸಿಂಗ್ ಅವರಿಗೆ ಸೂಚಿಸಿತು.

ಉಪ ಚುನಾವಣಾ ಆಯುಕ್ತ ಭಾನು ಪ್ರಕಾಶ್ ಯೆತುರು ಅವರ ಮೂಲಕ ಸಲ್ಲಿಸಿರುವ 248 ಪುಟಗಳ ಅಫಿಡವಿಟ್‌ನಲ್ಲಿ, ಫಾರ್ಮ್ 6ರಲ್ಲಿ ಯಾವುದೇ ತಿದ್ದುಪಡಿ ಮಾಡಿಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಆಯೋಗದ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುತ್ತಿರುವುದು ದುರದೃಷ್ಟಕರ ಎಂದು ಅಫಿಡವಿಟ್‌ನಲ್ಲಿ ಉಲ್ಲೇಖಿಸಿದ್ದು, ಎಸ್‌ಐಆರ್ ಪ್ರಕ್ರಿಯೆಗೆ ಮೂವರು ಚುನಾವಣಾ ಆಯುಕ್ತರು ಸರ್ವಾನುಮತದಿಂದ ಅನುಮೋದನೆ ನೀಡಿದ್ದಾರೆ ಎಂದು ತಿಳಿಸಿದೆ.

'ದಿ ಇಂಡಿಯನ್ ಎಕ್ಸ್‌ಪ್ರೆಸ್' ಪತ್ರಿಕೆಯು ಸೆಪ್ಟೆಂಬರ್ 25ರಂದು ಪ್ರಕಟಿಸಿದ ವರದಿಯ ಬಳಿಕ ಈ ಸಂಬಂಧ ಅರ್ಜಿಗಳು ಸಲ್ಲಿಕೆಯಾಗಿದ್ದವು. ವರದಿಯ ಪ್ರಕಾರ, ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು, ತಮ್ಮ ಗಮನಕ್ಕೆ ಬಾರದೆ ಅಥವಾ ತಮ್ಮ ಶಿಫಾರಸಿಲ್ಲದೆ ಕೈಗೊಂಡ ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳು ಮತ್ತು ಆದೇಶಗಳ ಕುರಿತು 10 ತಿಂಗಳ ಅವಧಿಯಲ್ಲಿ ಕನಿಷ್ಠ 14 ಆಕ್ಷೇಪಣೆಗಳನ್ನು ದಾಖಲಿಸಿದ್ದರು.

ವರದಿ ಪ್ರಕಟವಾದ ಬಳಿಕ ವಿರೋಧ ಪಕ್ಷಗಳು ಹಾಗೂ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಪ್ರತಿಭಟನೆ ನಡೆಸಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆಗೆದುಹಾಕುವಂತೆ ಆಗ್ರಹಿಸಿದ್ದವು.

## ಎಸ್‌ಐಆರ್ ಅಂತಿಮ ಪಟ್ಟಿ ಪ್ರಕಟ: ರಾಜ್ಯದಲ್ಲಿ 99.32 ಲಕ್ಷ ಮತದಾರರ ಕಡಿತ

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಂಡಿದ್ದು, ಚುನಾವಣಾ ಆಯೋಗ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಿದೆ. ಅಂತಿಮ ಪಟ್ಟಿಯಲ್ಲಿ 4.55 ಕೋಟಿ ಮತದಾರರು ಉಳಿದಿದ್ದು, ಪರಿಷ್ಕರಣೆಗೂ ಮುನ್ನ ಇದ್ದ ಪಟ್ಟಿಗೆ ಹೋಲಿಸಿದರೆ ಸುಮಾರು 99.32 ಲಕ್ಷ ಹೆಸರುಗಳು ಕಡಿಮೆಯಾಗಿವೆ.

2026ರ ಜೂನ್ 16ರ ವೇಳೆಗೆ ರಾಜ್ಯದಲ್ಲಿ 5,54,32,314 ಮತದಾರರಿದ್ದರು. ಆಗಸ್ಟ್ 24ರಂದು ಪ್ರಕಟಿಸಿದ ಕರಡು ಪಟ್ಟಿಯಲ್ಲಿ ಈ ಸಂಖ್ಯೆ ಸುಮಾರು 4.46 ಕೋಟಿಗೆ ಇಳಿದಿತ್ತು. ಹಕ್ಕು ಮತ್ತು ಆಕ್ಷೇಪಣೆಗಳ ಪರಿಶೀಲನೆ, ನೋಟಿಸ್‌ಗಳ ವಿಲೇವಾರಿ ಹಾಗೂ ಹೆಸರುಗಳ ಸೇರ್ಪಡೆ–ತಿದ್ದುಪಡಿ ಪ್ರಕ್ರಿಯೆ ಬಳಿಕ ಅಂತಿಮ ಪಟ್ಟಿ ಪ್ರಕಟಿಸಲಾಗಿದೆ. 2002ರ ಬಳಿಕ ರಾಜ್ಯದಲ್ಲಿ ನಡೆದ ಮೊದಲ ಎಸ್‌ಐಆರ್ ಇದಾಗಿದೆ.

ಅಂತಿಮ ಪಟ್ಟಿಯ ಪ್ರಕಾರ, ರಾಜ್ಯದಲ್ಲಿ 2,29,12,355 ಮಹಿಳಾ ಮತದಾರರು, 2,25,40,493 ಪುರುಷ ಮತದಾರರು ಹಾಗೂ 2,841 ಇತರ ಮತದಾರರಿದ್ದಾರೆ. 18ರಿಂದ 19 ವರ್ಷದೊಳಗಿನ 6,83,364 ಯುವ ಮತದಾರರು, 85 ವರ್ಷ ಮೇಲ್ಪಟ್ಟ 3,92,134 ಹಿರಿಯ ಮತದಾರರು ಮತ್ತು 5,65,340 ವಿಶೇಷ ಚೇತನ ಮತದಾರರು ಪಟ್ಟಿಯಲ್ಲಿದ್ದಾರೆ. ಸೇವಾ ಮತದಾರರ ಸಂಖ್ಯೆ 44,322 ಆಗಿದ್ದು, ಸಾಗರೋತ್ತರ ಮತದಾರರು 3,252 ಮಂದಿ ಇದ್ದಾರೆ.

### 43.84 ಲಕ್ಷ ಮಂದಿಗೆ ನೋಟಿಸ್

ಎಸ್‌ಐಆರ್ ವೇಳೆ ಹಿಂದಿನ ಮತದಾರರ ಪಟ್ಟಿಯ ವಿವರಗಳಲ್ಲಿನ ವ್ಯತ್ಯಾಸ ಹಾಗೂ 2002ರ ಪಟ್ಟಿಯಲ್ಲಿ ಮಾಹಿತಿ ಲಭ್ಯವಿಲ್ಲದಿರುವುದು ಸೇರಿದಂತೆ ವಿವಿಧ ಕಾರಣಗಳಿಗೆ ಸುಮಾರು 43.84 ಲಕ್ಷ ಮತದಾರರಿಗೆ ನೋಟಿಸ್ ನೀಡಲಾಗಿತ್ತು. ದಾಖಲೆ ಸಲ್ಲಿಕೆ, ವಿಚಾರಣೆ ಮತ್ತು ಪರಿಶೀಲನೆ ಬಳಿಕ ಅಂತಿಮ ಪಟ್ಟಿ ಸಿದ್ಧಪಡಿಸಲಾಗಿದೆ. ಸ್ಥಳಾಂತರಗೊಂಡವರು, ಮೃತಪಟ್ಟವರು, ಗೈರುಹಾಜರಾದವರು ಹಾಗೂ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವವರ ವಿವರಗಳನ್ನೂ ಪರಿಶೀಲನೆಗೆ ಒಳಪಡಿಸಲಾಗಿತ್ತು.

ಜೂನ್ 16ರಿಂದ ಅಕ್ಟೋಬರ್ 22ರವರೆಗೆ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಒಟ್ಟು 25,87,461 ಅರ್ಜಿಗಳು ಸ್ವೀಕೃತವಾಗಿವೆ. ಇವುಗಳಲ್ಲಿ ಹೊಸ ಮತದಾರರ ಸೇರ್ಪಡೆಗೆ 10,42,863 ಫಾರ್ಮ್–6 ಅರ್ಜಿಗಳು, ಸಾಗರೋತ್ತರ ಮತದಾರರ ನೋಂದಣಿಗೆ 4,840 ಫಾರ್ಮ್–6ಎ ಅರ್ಜಿಗಳು, ಹೆಸರು ಸೇರ್ಪಡೆಗೆ ಆಕ್ಷೇಪಣೆ ಅಥವಾ ಹೆಸರು ತೆಗೆದುಹಾಕುವಿಕೆಗೆ ಸಂಬಂಧಿಸಿದಂತೆ 2,28,917 ಫಾರ್ಮ್–7 ಅರ್ಜಿಗಳು ಹಾಗೂ ವಿವರಗಳ ತಿದ್ದುಪಡಿಗಾಗಿ 13,10,841 ಫಾರ್ಮ್–8 ಅರ್ಜಿಗಳು ಸೇರಿವೆ.

ಅಂತಿಮ ಪಟ್ಟಿಯಲ್ಲಿ ಹೆಸರು ಇಲ್ಲದ ಅರ್ಹ ಮತದಾರರು ಅಥವಾ ವಿವರಗಳಲ್ಲಿ ತಿದ್ದುಪಡಿ ಮಾಡಬೇಕಿರುವವರು ಚುನಾವಣಾ ಆಯೋಗದ ಅಧಿಕೃತ ವೆಬ್‌ಸೈಟ್ ceo.karnataka.gov.in ಮೂಲಕ ಮಾಹಿತಿ ಪಡೆದು, ನಿಯಮಾನುಸಾರ ಅರ್ಜಿ ಸಲ್ಲಿಸಬಹುದು. ಮತದಾರರ ಪಟ್ಟಿಯಿಂದ ಹೆಸರು ಕಡಿಮೆಯಾಗಿದೆ ಎಂಬ ಕಾರಣಕ್ಕೆ ಮಾತ್ರ ಅರ್ಹತೆ ಕಳೆದುಕೊಂಡಿದ್ದಾರೆ ಎಂದು ಅರ್ಥವಲ್ಲ; ತಮ್ಮ ಹೆಸರು ಮತ್ತು ವಿವರಗಳನ್ನು ಪರಿಶೀಲಿಸಿಕೊಳ್ಳುವುದು ಅಗತ್ಯವಾಗಿದೆ.

## ಹಂಪಿಗೆ ಯುನೆಸ್ಕೋ ತಂಡ ಭೇಟಿ: ಪಾರಂಪರಿಕ ತಾಣಗಳ ಪರಿಶೀಲನೆ

● ವಿಕ್ರಮ ವಾಹಿನಿ | ಬಳ್ಳಾರಿ

ವಿಜಯನಗರ ಸಾಮ್ರಾಜ್ಯದ ಗತವೈಭವವನ್ನು ಸಾರುವ ವಿಶ್ವವಿಖ್ಯಾತ ಹಂಪಿಗೆ ಯುನೆಸ್ಕೋ ತಂಡ ಭೇಟಿ ನೀಡಿ, ಪ್ರಮುಖ ಐತಿಹಾಸಿಕ ಸ್ಮಾರಕಗಳ ಸ್ಥಿತಿಗತಿ ಪರಿಶೀಲಿಸಿದೆ. ಕಳೆದ ಮೂರು ದಿನಗಳಿಂದ ಹಂಪಿಯಲ್ಲಿ ಪ್ರವಾಸ ಕೈಗೊಂಡಿರುವ ತಂಡವು ಪಾರಂಪರಿಕ ತಾಣಗಳ ಸಂರಕ್ಷಣೆ, ಅಭಿವೃದ್ಧಿ ಹಾಗೂ ಪ್ರವಾಸಿಗರಿಗೆ ಕಲ್ಪಿಸಿರುವ ಮೂಲಸೌಕರ್ಯಗಳ ಕುರಿತು ಮಾಹಿತಿ ಸಂಗ್ರಹಿಸಿದೆ.

ತಂಡವು ವಿರೂಪಾಕ್ಷೇಶ್ವರ ದೇವಸ್ಥಾನ, ವಿಜಯ ವಿಠಲ ದೇವಸ್ಥಾನ, ಸಂಗೀತ ಮಂಟಪ, ಮಹಾನವಮಿ ದಿಬ್ಬ ಹಾಗೂ ಕಲ್ಲಿನ ರಥ ಸೇರಿದಂತೆ ಹಲವು ಪ್ರಮುಖ ಸ್ಮಾರಕಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಹಂಪಿಯ ಐತಿಹಾಸಿಕ ಮಹತ್ವವನ್ನು ಉಳಿಸಿಕೊಂಡು, ಪ್ರವಾಸೋದ್ಯಮವನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ಸಾಧ್ಯತೆಗಳ ಬಗ್ಗೆಯೂ ಅಧ್ಯಯನ ನಡೆಸಿದೆ.

ಹಂಪಿಗೆ ಭೇಟಿ ನೀಡುವ ಪ್ರವಾಸಿಗರು ಹಾಗೂ ಮಾರ್ಗದರ್ಶಕರು ಶೌಚಾಲಯ, ಕುಡಿಯುವ ನೀರು, ರಸ್ತೆ ಮತ್ತು ವಾಹನ ಸೌಲಭ್ಯಗಳ ಕೊರತೆ ಕುರಿತು ಸಮಸ್ಯೆಗಳನ್ನು ಪ್ರಸ್ತಾಪಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರವಾಸಿಗರಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವುದು ಹಾಗೂ ಪಾರಂಪರಿಕ ಸ್ಮಾರಕಗಳಿಗೆ ಹಾನಿಯಾಗದಂತೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಕುರಿತು ತಂಡವು ಮಾಹಿತಿ ಕಲೆಹಾಕಿದೆ.

1986ರಲ್ಲಿ ಯುನೆಸ್ಕೋದ ವಿಶ್ವ ಪಾರಂಪರಿಕ ತಾಣಗಳ ಪಟ್ಟಿಗೆ ಸೇರ್ಪಡೆಗೊಂಡಿರುವ ಹಂಪಿಯ ಸಂರಕ್ಷಣೆ ಮತ್ತು ಸಮಗ್ರ ಅಭಿವೃದ್ಧಿ ಪ್ರಮುಖ ಉದ್ದೇಶವಾಗಿದೆ. ವಿಜಯನಗರ ಹಾಗೂ ಕೊಪ್ಪಳ ಜಿಲ್ಲೆಗಳ ಪ್ರವಾಸೋದ್ಯಮ ಪಾಲುದಾರರೊಂದಿಗೂ ತಂಡ ಸಮಾಲೋಚನೆ ನಡೆಸಿದ್ದು, ಹಂಪಿಯ ಐತಿಹಾಸಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಅಗತ್ಯವನ್ನು ಒತ್ತಿಹೇಳಿದೆ.

ಹಂಪಿಯ ಸ್ಮಾರಕಗಳ ಸಂರಕ್ಷಣೆಯ ಜೊತೆಗೆ ಪ್ರವಾಸಿಗರಿಗೆ ಉತ್ತಮ ಅನುಭವ ಒದಗಿಸುವುದು, ಐತಿಹಾಸಿಕ ಕಟ್ಟಡಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡುವುದು ಹಾಗೂ ಪ್ರವಾಸಿ ತಾಣಗಳ ನಿರ್ವಹಣೆಯನ್ನು ಸುಧಾರಿಸುವುದು ಪರಿಶೀಲನೆಯ ಪ್ರಮುಖ ಭಾಗವಾಗಿದೆ. ತಂಡದ ಭೇಟಿ ಮತ್ತು ಅಧ್ಯಯನದಿಂದ ಹಂಪಿಯ ಪಾರಂಪರಿಕ ಮೌಲ್ಯವನ್ನು ಕಾಪಾಡಲು ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಗುರುತಿಸಲು ನೆರವಾಗುವ ನಿರೀಕ್ಷೆಯಿದೆ.

## ಅರ್ನಬ್ ಅಬ್ಬರ: ರೈಲು, ವಿಮಾನ ಸಂಚಾರ ರದ್ದು

● ವಿಕ್ರಮ ವಾಹಿನಿ | ಹೈದರಾಬಾದ್

ಬಂಗಾಳ ಕೊಲ್ಲಿಯಲ್ಲಿ ರೂಪುಗೊಂಡಿರುವ 'ಅರ್ನಬ್' ಚಂಡಮಾರುತದ ಪರಿಣಾಮ ಆಂಧ್ರಪ್ರದೇಶ ಮತ್ತು ಒಡಿಶಾದ ಹಲವು ಭಾಗಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಚಂಡಮಾರುತದ ಭೀತಿಯಿಂದ ಮುನ್ನೆಚ್ಚರಿಕೆ ಕ್ರಮವಾಗಿ ಕನಿಷ್ಠ 65 ರೈಲುಗಳು ಮತ್ತು 21 ವಿಮಾನಗಳ ಸೇವೆಯನ್ನು ರದ್ದುಗೊಳಿಸಲಾಗಿದೆ. ಕರಾವಳಿ ಪ್ರದೇಶಗಳಲ್ಲಿ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಲಾಗಿದೆ.

ಭಾರತೀಯ ಹವಾಮಾನ ಇಲಾಖೆ ಆಂಧ್ರಪ್ರದೇಶದ ಕರಾವಳಿ ಭಾಗಗಳಿಗೆ ಭಾರಿ ಮಳೆ ಮತ್ತು ಬಿರುಗಾಳಿಯ ಎಚ್ಚರಿಕೆ ನೀಡಿದೆ. ಚಂಡಮಾರುತವು ಬುಧವಾರ ಆಂಧ್ರಪ್ರದೇಶದ ಕರಾವಳಿಯನ್ನು ದಾಟುವ ನಿರೀಕ್ಷೆಯಿದ್ದು, ಉತ್ತರ ಕರಾವಳಿ ಜಿಲ್ಲೆಗಳು ಹಾಗೂ ತಗ್ಗು ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ. ಇದರ ಪರಿಣಾಮವಾಗಿ ಪಶ್ಚಿಮ ಬಂಗಾಳ, ಜಾರ್ಖಂಡ್, ಛತ್ತೀಸ್‌ಗಢ ಮತ್ತು ಉತ್ತರ ಪ್ರದೇಶದ ಕೆಲವು ಭಾಗಗಳಲ್ಲಿಯೂ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

**4 ಲಕ್ಷ ಜನರ ಸ್ಥಳಾಂತರಕ್ಕೆ ಸಿದ್ಧತೆ:** ಚಂಡಮಾರುತದ ಅಪಾಯ ಎದುರಿಸಲು ಆಂಧ್ರಪ್ರದೇಶ ಮತ್ತು ಒಡಿಶಾದಲ್ಲಿ ಸಾವಿರಾರು ಆಶ್ರಯ ಕೇಂದ್ರಗಳನ್ನು ಸಿದ್ಧಪಡಿಸಲಾಗಿದೆ. ಆಂಧ್ರಪ್ರದೇಶದಲ್ಲಿ ಈಗಾಗಲೇ 50,000ಕ್ಕೂ ಹೆಚ್ಚು ಜನರನ್ನು ಅಪಾಯಕಾರಿ ಪ್ರದೇಶಗಳಿಂದ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಒಟ್ಟು ನಾಲ್ಕು ಲಕ್ಷ ಜನರನ್ನು ಸ್ಥಳಾಂತರಿಸುವ ಗುರಿಯೊಂದಿಗೆ ಕಾರ್ಯಾಚರಣೆ ಮುಂದುವರಿದಿದೆ ಎಂದು ವರದಿಯಾಗಿದೆ.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್), ರಾಜ್ಯ ವಿಪತ್ತು ನಿರ್ವಹಣಾ ಪಡೆ (ಎಸ್‌ಡಿಆರ್‌ಎಫ್) ಮತ್ತು ಅಗ್ನಿಶಾಮಕ ದಳದ ತಂಡಗಳನ್ನು ರಕ್ಷಣಾ ಕಾರ್ಯಕ್ಕೆ ನಿಯೋಜಿಸಲಾಗಿದೆ. ವೈದ್ಯಕೀಯ ತಂಡಗಳನ್ನೂ ಸನ್ನದ್ಧ ಸ್ಥಿತಿಯಲ್ಲಿ ಇರಿಸಲಾಗಿದೆ.

**ಶಾಲಾ–ಕಾಲೇಜುಗಳಿಗೆ ರಜೆ:** ಚಂಡಮಾರುತದ ಮುನ್ನೆಚ್ಚರಿಕೆ ಹಿನ್ನೆಲೆಯಲ್ಲಿ ಆಂಧ್ರಪ್ರದೇಶದ 10 ಜಿಲ್ಲೆಗಳಲ್ಲಿ ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಅನಕಾಪಲ್ಲಿ ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ರಜೆ ವಿಸ್ತರಿಸಲಾಗಿದೆ. ಕರಾವಳಿ ಭಾಗದ ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದ್ದು, 30,000ಕ್ಕೂ ಹೆಚ್ಚು ಮೀನುಗಾರಿಕಾ ದೋಣಿಗಳನ್ನು ಸುರಕ್ಷಿತವಾಗಿ ದಡಕ್ಕೆ ತರಲಾಗಿದೆ.

**ಮುನ್ನೆಚ್ಚರಿಕೆಗೆ ಸಿಎಂ ಸೂಚನೆ:** ತಗ್ಗು ಪ್ರದೇಶಗಳ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವುದು, ಅಗತ್ಯ ಪರಿಹಾರ ಸಾಮಗ್ರಿಗಳನ್ನು ಸಿದ್ಧವಾಗಿಡುವುದು ಹಾಗೂ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ತ್ವರಿತವಾಗಿ ಸರಿಪಡಿಸುವಂತೆ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಚಂಡಮಾರುತದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಜನರು ಅಧಿಕೃತ ಸೂಚನೆಗಳನ್ನು ಪಾಲಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಬೆಂಗಳೂರಿನ ಮೂಲಸೌಕರ್ಯಕ್ಕೆ ರೂ 1 ಲಕ್ಷ ಕೋಟಿ ಹೂಡಿಕೆ ಗುರಿ: ಡಿಕೆಶಿ

● ವಿಕ್ರಮ ವಾಹಿನಿ | ಬೆಂಗಳೂರು

ಬೆಂಗಳೂರಿನ ವೇಗವಾಗಿ ಹೆಚ್ಚುತ್ತಿರುವ ಜನಸಂಖ್ಯೆ ಮತ್ತು ವಾಹನ ದಟ್ಟಣೆಗೆ ಅನುಗುಣವಾಗಿ ನಗರದ ಮೂಲಸೌಕರ್ಯವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಆದ್ಯತೆ ನೀಡಿದೆ. ಮುಂದಿನ 10 ವರ್ಷಗಳ ಅಭಿವೃದ್ಧಿ ಯೋಜನೆಗಳಿಗಾಗಿ ಸುಮಾರು ರೂ 1 ಲಕ್ಷ ಕೋಟಿ ಅಗತ್ಯವಿದ್ದು, ಹಂತ ಹಂತವಾಗಿ ಅನುದಾನ ಒದಗಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ಬೆಂಗಳೂರು ಅಭಿವೃದ್ಧಿ ಕಾಮಗಾರಿಗಳ ಕುರಿತು ನಗರದ ಶಾಸಕರ ಸಭೆಯನ್ನು ಮಂಗಳವಾರ ನಡೆಸಿದರು. ಸಚಿವ ಕೃಷ್ಣ ಬೈರೇಗೌಡ, ರಿಜ್ವಾನ್ ಅರ್ಷದ್, ಶಾಸಕ ದಿನೇಶ್ ಗುಂಡೂರಾವ್, ಶ್ರೀನಿವಾಸ್, ಅಶ್ವಥ್ ನಾರಾಯಣ, ಎಸ್ ಟಿ ಸೋಮಶೇಖರ್, ಬೈರತಿ ಬಸವರಾಜ್, ಸತೀಶ್ ರೆಡ್ಡಿ, ಮಂಜುಳಾ ಅರವಿಂದ್ ಲಿಂಬಾವಳಿ, ಎಸ್ ಆರ್ ವಿಶ್ವನಾಥ್, ರವಿ ಸುಬ್ರಮಣ್ಯ, ಎಂಎಲ್‌ಎ ವಿನಯ್ ಕಾರ್ತಿಕ್, ಗೋವಿಂದರಾಜು, ಶರವಣ, ಅಪರ ಮುಖ್ಯಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯಆಯುಕ್ತರಾದ ಮಹೇಶ್ವರ್ ರಾವ್ ಮತ್ತಿತರರು ಉಪಸ್ಥಿತರಿದ್ದರು.

ಮಂಗಳವಾರ ಅಧಿಕೃತ ನಿವಾಸ ಕೃಷ್ಣಾದಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರೊಂದಿಗೆ ಸಭೆ ನಡೆಸಿದ ಅವರು, ಸಂಚಾರ ದಟ್ಟಣೆ ನಿವಾರಣೆ, ರಸ್ತೆ ಅಭಿವೃದ್ಧಿ, ಸಾರ್ವಜನಿಕ ಸಾರಿಗೆ ವಿಸ್ತರಣೆ, ಕುಡಿಯುವ ನೀರು ಮತ್ತು ಕಸ ನಿರ್ವಹಣೆ ಕುರಿತು ಚರ್ಚಿಸಿದರು.

ಎಲ್ಲ ಕ್ಷೇತ್ರಗಳಿಗೂ ತಾರತಮ್ಯವಿಲ್ಲದೆ ಅಗತ್ಯ ಅನುದಾನ ಒದಗಿಸಲಾಗಿದ್ದು, ಶಾಸಕರು ತಮ್ಮ ಕ್ಷೇತ್ರಗಳ ತುರ್ತು ಕಾಮಗಾರಿಗಳ ಪ್ರಸ್ತಾವನೆ ಸಲ್ಲಿಸಿದರೆ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಂಚಾರ ದಟ್ಟಣೆ ನಿವಾರಣೆಗೆ ಸುರಂಗ ಮಾರ್ಗ

ನಗರದ ಸಂಚಾರ ವ್ಯವಸ್ಥೆ ಸುಧಾರಿಸಲು 40 ಕಿ.ಮೀ. ಉದ್ದದ ದ್ವಿಪಥ ಸುರಂಗ ಮಾರ್ಗ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಇದರಲ್ಲಿ 16.5 ಕಿ.ಮೀ. ಉದ್ದದ ಉತ್ತರ–ದಕ್ಷಿಣ ಕಾರಿಡಾರ್‌ಗೆ ರೂ 17,780 ಕೋಟಿ ವೆಚ್ಚವಾಗಲಿದ್ದು, ಸರ್ಕಾರ ರೂ 7,000 ಕೋಟಿ ಹೂಡಿಕೆ ಮಾಡಲಿದೆ. 21 ಕಿ.ಮೀ. ಉದ್ದದ ಪೂರ್ವ–ಪಶ್ಚಿಮ ಕಾರಿಡಾರ್ ನಿರ್ಮಾಣದ ಯೋಜನೆಯೂ ಇದೆ. ಹೆಬ್ಬಾಳದಲ್ಲಿ 2 ಕಿ.ಮೀ. ಉದ್ದದ ಸುರಂಗ ಕಾಮಗಾರಿಯನ್ನೂ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿ ಮಾನದಂಡಗಳ ಆಧಾರದಲ್ಲಿ ರೂ 23,165 ಕೋಟಿ ವೆಚ್ಚದಲ್ಲಿ 120 ಕಿ.ಮೀ. ಉದ್ದದ ಎತ್ತರಿಸಿದ ಕಾರಿಡಾರ್ ನಿರ್ಮಿಸುವ ಯೋಜನೆ ರೂಪಿಸಲಾಗಿದೆ. 10 ಕಿ.ಮೀ.ಗಿಂತ ಕಡಿಮೆ ಉದ್ದದ ಕಾರಿಡಾರ್‌ಗಳಲ್ಲಿ ಟೋಲ್ ವಿಧಿಸುವುದಿಲ್ಲ ಎಂದು ಹೇಳಿದರು.

ನಗರದಲ್ಲಿ ಸುಮಾರು 500 ಕಿ.ಮೀ. ಹೊಸ ರಸ್ತೆ ಸಂಪರ್ಕ ನಿರ್ಮಿಸುವ ಉದ್ದೇಶವಿದ್ದು, ಕಾಲುವೆಗಳ ಬದಿಯಲ್ಲಿ 300 ಕಿ.ಮೀ. ಬಫರ್ ರಸ್ತೆ ಹಾಗೂ 68 ಕಿ.ಮೀ. ಬಿಸಿನೆಸ್ ಕಾರಿಡಾರ್ ನಿರ್ಮಾಣವೂ ಯೋಜನೆಯಲ್ಲಿದೆ. 17 ಕಿ.ಮೀ. ಹೊರವರ್ತುಲ ರಸ್ತೆಯ ಮರು ಅಭಿವೃದ್ಧಿ ಮತ್ತು 1,500 ಕಿ.ಮೀ. ಪ್ರಮುಖ ಹಾಗೂ ಉಪಪ್ರಮುಖ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ನಗರದ ಹೊರವಲಯದಲ್ಲಿ 18 ಕಿ.ಮೀ. ವೈಟ್‌ಟಾಪಿಂಗ್ ಕಾಮಗಾರಿಯನ್ನೂ ಶೀಘ್ರ ಆರಂಭಿಸಲಾಗುವುದು ಎಂದರು.

ಹೊರವರ್ತುಲ ರಸ್ತೆ ವ್ಯಾಪ್ತಿಯಲ್ಲಿ 37 ಕಿ.ಮೀ. ಡಬಲ್ ಡೆಕ್ಕರ್ ರಸ್ತೆ ನಿರ್ಮಿಸಲು ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರ್ಕಾರ 11 ಕಿ.ಮೀ. ರಸ್ತೆ ನಿರ್ಮಾಣಕ್ಕೆ ಮಾತ್ರ ಅನುಮತಿ ನೀಡಿದೆ ಎಂದು ತಿಳಿಸಿದರು.

**ಮೆಟ್ರೋ, ಬಸ್ ಸೇವೆ ವಿಸ್ತರಣೆ:** ರಸ್ತೆ ನಿರ್ಮಾಣವೊಂದರಿಂದಲೇ ಸಂಚಾರ ಸಮಸ್ಯೆ ಪರಿಹಾರವಾಗುವುದಿಲ್ಲ. ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವುದು ಸರ್ಕಾರದ ಆದ್ಯತೆಯಾಗಿದೆ. ಪ್ರಸ್ತುತ 96 ಕಿ.ಮೀ. ಇರುವ ಮೆಟ್ರೋ ಸಂಪರ್ಕವನ್ನು 2027ರ ವೇಳೆಗೆ 170 ಕಿ.ಮೀ.ಗೆ ವಿಸ್ತರಿಸುವ ಗುರಿ ಹೊಂದಲಾಗಿದೆ.

ಈಗಿರುವ 7,000 ಬಸ್‌ಗಳಿಗೆ ಹೆಚ್ಚುವರಿಯಾಗಿ 4,500 ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗುವುದು. ಉಪನಗರ ರೈಲು ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿದ್ದು, 2030ರ ವೇಳೆಗೆ 150 ಕಿ.ಮೀ. ಸಂಪರ್ಕ ಕಲ್ಪಿಸುವ ಗುರಿಯಿದೆ ಎಂದರು.

ಬೆಂಗಳೂರು ನಗರಕ್ಕೆ ಹೆಚ್ಚುವರಿ ನೀರು ಪೂರೈಸಲು ಕಾವೇರಿ ಆರನೇ ಹಂತದ ಯೋಜನೆ ಕೈಗೆತ್ತಿಕೊಳ್ಳಲಾಗುವುದು. ಜಿಬಿಎ ವ್ಯಾಪ್ತಿಯ ಹೊರಗಿರುವ ನಗರೀಕರಣಗೊಂಡ 65 ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಮೇಲ್ದರ್ಜೆಗೇರಿಸುವ ಉದ್ದೇಶವಿದೆ.

ಈ ಪ್ರದೇಶಗಳಿಗೆ ಹಂತ ಹಂತವಾಗಿ ಶಾಶ್ವತ ಕುಡಿಯುವ ನೀರು, ಒಳಚರಂಡಿ ಹಾಗೂ ಉತ್ತಮ ರಸ್ತೆ ಸಂಪರ್ಕ ಕಲ್ಪಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಹೇಳಿದರು.

**ಕಸ ನಿರ್ವಹಣೆಗೆ ಹೊಸ ಟೆಂಡರ್:** ನಗರದ ಕಸ ನಿರ್ವಹಣೆಯನ್ನು ವ್ಯವಸ್ಥಿತಗೊಳಿಸಲು 27 ಕ್ಷೇತ್ರಗಳಲ್ಲಿ ರೂಪಿಸಿದ್ದ 33 ಪ್ಯಾಕೇಜ್‌ಗಳ ಪೈಕಿ 21 ಪ್ಯಾಕೇಜ್‌ಗಳಿಗೆ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿದೆ. ಅರ್ಹ ಗುತ್ತಿಗೆದಾರರಿಗೆ ಶೀಘ್ರ ಕಾರ್ಯಾದೇಶ ನೀಡಲಾಗುವುದು.

ಹೊಸ ವ್ಯವಸ್ಥೆಯಡಿ ದಿನಕ್ಕೆ 9,000 ಟನ್‌ವರೆಗೆ ಕಸ ಸಂಗ್ರಹಿಸಲು ಸಾಧ್ಯವಾಗಲಿದೆ.

ಕಸ ಸಂಗ್ರಹಿಸುವ ಎಲ್ಲ ವಾಹನಗಳಿಗೂ ಜಿಪಿಎಸ್ ಅಳವಡಿಕೆ ಕಡ್ಡಾಯವಾಗಿದ್ದು, ಹೊಸ ವಾಹನಗಳನ್ನೇ ಬಳಸಬೇಕು. ಕಸ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಗುತ್ತಿಗೆದಾರರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಬೆಂಗಳೂರು ನಗರ ನಿರ್ಮಾಣವಾಗಿ 2027ಕ್ಕೆ 500 ವರ್ಷಗಳು ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ ಮುಂದಿನ ದಶಕದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿ ಯೋಜನೆಗಳನ್ನು ರೂಪಿಸಲಾಗಿದೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಜಲಮಂಡಳಿ ಮೂಲಕವೂ ಮೂಲಸೌಕರ್ಯಕ್ಕೆ ಹೆಚ್ಚಿನ ಬಂಡವಾಳ ಹೂಡಿಕೆ ಮಾಡಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.



Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 199,